ಗಂಗಾವತಿಯಿಂದ ಹುಬ್ಬಳಿ-ಧಾರವಾಡ, ಗದಗ, ರಾಯಚೂರು, ಬಳ್ಳಾರಿ, ಯಾದಗಿರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಪ್ರಸಾರಗೊಳ್ಳಲಿದೆ

ಗಂಗಾವತಿ. ಮಂಗಳವಾರ | 08 ಜುಲೈ-2025 | ಸಂಪುಟ-03 | ಸಂಚಿಕೆ-156 | ಪುಟಗಳು-04 | ಬೆಲೆ-3 ರೂಪಾಯಿ

# ತುಂಗಾಕಿರಣ

TUNGA KIRAN

Kannada daily morning

ಕನ್ನಡ ದಿನಪತ್ರಿಕೆ

ಸಂಪಾದಕರು : ಪರಶುರಾಮ | ಉಪಸಂಪಾದಕರು : ಚಂದ್ರಶೇಖರ್ ಈ | ಉಪಸಂಪಾದಕರು: ರಘುನಾಥ ದೇಶಪಾಂಡೆ | ಉಪಸಂಪಾದಕರು: ವೈ. ಮೌನಯ್ಯ ನಾಯಕ

ಶುಭಾಷಿತ



## ಭಾವೈಕ್ಯತೆಯ ಸಂಗಮ ಮೊಹರಂ ಆಚರಣೆ

**ಕೊಟ್ಟೂರು :** ಮೊಹರಂ ಹಬ್ಬವನ್ನು ಇಲ್ಲಿನ ಮುಸ್ಲಿಂರಿಗಿಂತ ಅನ್ಯಕೋಮಿನ ಜನರು ಶ್ರದ್ಧ ಭಕ್ತಿಗಳೊಂದಿಗೆ ಭಾನುವಾರ ಆಚರಿಸಿದರು. ಇದರ ಅಂಗವಾಗಿ ಪೀರಲ ದೇವರುಗಳನ್ನು ಪಟ್ಟಣದ ನಾಲ್ಕೈದು ಮಸೀದಿಗಳಿಂದ ಮೆರವಣಿಗೆ ಮೂಲಕ ತಂದು ಮುಸ್ಲಿಂ ಬಳಗದವರನ್ನು ವೈಭವದ ಮೆರವಣಿಗೆ ಮೂಲಕ ಕೊಂಡು ಒಯ್ಯಲಾಯಿತು.

ಮೆರವಣಿಗೆಯುದ್ದಕ್ಕೂ ಪಾಲ್ಗೊಂಡಿದ್ದ ಭಕ್ತರು ಕ್ಯಾಹುಸೇನ್-ಬೌಸೇನ್ ಎಂಬ ಘೋಷಣೆಗಳನ್ನು ಕೂಗಿದರಲ್ಲದೇ ನೃತ್ಯ ಮಾಡುತ್ತ ಉದ್ದಕ್ಕೂ ಸಾಗಿದರು. ಮೆರವಣಿಗೆ ಗಾಂಧಿ ವೃತ್ತದ ಬಳಿ ಬರುತ್ತಿದ್ದಂತೆ ಹರಿಜನ ಮಹಿಳೆಯರು ಸೇರಿದಂತೆ ಇತರರು ನೆಲಕ್ಕೆ ಮಲಗಿ ಪೀರ್ಲದೇವರನ್ನು ಹೊತ್ತವರು ತಮ್ಮನ್ನು ತುಳಿದು ಸಾಗಲೀ ಎಂದು ಬಯಸಿದರು.

ಹೀಗೆ ಮಾಡುವುದರಿಂದ ತಮಗೆ ಒಳಿತಾಗುತ್ತದೆ ಎಂಬ ನಂಬಿಕೆ ಅವರಲ್ಲಿ ಮನೆ ಮಾಡಿದ್ದು ಈ ಕಾರಣ-



ಕ್ಕಾಗಿ ಮೆರವಣಿಗೆ ಸಾಗುವ ಕೆಲ ಪ್ರದೇಶಗಳಲ್ಲಿ ಇದೇ ತೆರನಾದ ನೆಲಕ್ಕೆ ಮಲಗುವ ಭಕ್ತರು ಕಂಡುಬಂದರು.

ಮೆರವಣಿಗೆ ಪಟ್ಟಣ ಹೊರಪ್ರದೇಶದಲ್ಲಿನ ಕೆರೆಗೆ ತೆರಳಿ ಪೀರ್ಲ ದೇವರುಗಳನ್ನು ವಿಸರ್ಜಿಸಿದರು ನಂತರ ದೇವರ ಮೂರ್ತಿಗಳನ್ನು ಅವುಗಳನ್ನು ಪೆಟ್ಟಿಗೆಯಲ್ಲಿ ಇರಿಸಿ ತಲೆಯ ಮೇಲೆ ಹೊತ್ತುಕೊಂಡು ರಾತ್ರಿ 9 ರ ಸುಮಾರಿಗೆ ವಿದಾಯ ಗೀತೆಯನ್ನು ರಾಗಬದ್ದವಾಗಿ ಹಾಡುತ್ತ ಪಟ್ಟಣದ ಮಸೀದಿಗಳ ಬಳಿ ಬಂದರು ಮೊಹರಂ ಹಬ್ಬದ ನಿಮಿತ್ತ ಪೋಲಿಸರು ಬಿಗಿ ಬಂದೋಬಸ್ತ ನಿಯೋಜನೆಗೊಂಡಿತ್ತು

## ಮಾನ್ವಿ ಹಿಂದೂ ಮುಸ್ಲಿಂ. ಭಾವೈಕ್ಯತೆಯ ಮೊಹರಂ ಹಬ್ಬ ಆಚರಣೆ

**ವರದಿ: ಈರಪ್ಪ ದದ್ದಲ್**

**ಮಾನ್ವಿ:** ತಾಲೂಕಿನ ದದ್ದಲ್ ಗ್ರಾಮದಲ್ಲಿ ಪೀರಲ್ ದೇವರು. ದಫನ್ ಅದವು ಹುಸೇನಿ ತಾತಾ ಮೌಲಾಲಿ ತಾತಾ ಪೀರಲ್ ದೇವರು ಹುಸೇನಿ ತಾತಾ ದೇವರು ಈರಪ್ಪ ತಾತನವರು ಸವಾರಿ ಮಾಡಿದರು. ಮೌಲಾಲಿ ತಾತನವರನ್ನು ಬಾಬು ಕಾತರಕಿ ಸವಾರಿ ಮಾಡಿದರು ಐದು ಸುತ್ತು ದೇವರು ಅಗ್ನಿ ಕುಂಡ ಪ್ರವೇಶ ಮಾಡಲಾಯಿತು ತಾತನವರು. ಪೀರಲ್ ದೇವರು ತುಂಗಾಭದ್ರಾ ನದಿಯಲ್ಲಿ ದಫನ್ ಮಾಡಲಾಯಿತು ಗ್ರಾಮದ ಯುವಕರು ಬಣ್ಣಬಣ ಟಿ.ಶರ್ಟ್ ಧರಿಸಿ ಮತ್ತು ಬಟ್ಟೆ ಧರಿಸಿ ಮತ್ತು ಯುವಕರು ಕಾಲು. ಗಜ್ಜಿ ಕಟ್ಟಿಕೊಂಡು ಅಲೈಕುಣಿದರು ಗ್ರಾಮದ ಮುಖಂಡರು ಮತ್ತು ಸುತ್ತಮುತ್ತಲಿನ ಭಕ್ತರು ಆಗಮಿಸಿ ಸಂಭ್ರಮಿಸಿದರು





ಸ್ನೇಹ ಭ್ರಾತೃತ್ವದ ಸಂಕೇತ ಹಬ್ಬದ ಆಚರಣೆ ಸರ್ವ ಧರ್ಮಯರು ಆಚರಿಸುವ ವೈಶಿಷ್ಟ್ಯಪೂರ್ಣ ಹಬ್ಬ ಮಾನ್ವಿ ತಾಲೂಕು ದದ್ದಲ್ ಗ್ರಾಮದಲ್ಲಿ ಜಾತಿಯ ಹಂಗಿಲ್ಲದೇ ಮನುಕುಲ ಒಂದೇ ಎಂಬ ಸಂದೇಶ ಸಾರಿ ಸರ್ವಧರ್ಮಗಳ ಭಾವೈಕ್ಯತೆಯ ಕೊಂಡಯಾಗಿರುವ ಮೊಹರಂ ಹಬ್ಬ ಆಚರಣೆ ಆಧುನಿಕ ಯುಗದಲ್ಲಿ ಸ್ನೇಹ ಭ್ರಾತೃತ್ವದ ಸಂಕೇತವಾಗಿ ನಡೆದುಕೊಂಡು ಬಂದಿದೆ ಹುತಾತ್ಮರನ್ನು ನೆನೆಯುವ ಉದ್ದೇಶದಿಂದ ವಿಶ್ವದಾದ್ಯಂತ ಮೊಹರಂ ಹಬ್ಬವನ್ನು ಜಾತಿಭೇದವಿಲ್ಲದೇ ಶೋಕದ ಮೂಲಕ ಆಚರಿಸಲಾಗುತ್ತಿದೆ ಮೊಹರಂ ವರ್ವ ಧರ್ಮಿಯರು ಆಚರಿಸುವ ವೈಶಿಷ್ಟ್ಯಪೂರ್ಣ ಹಬ್ಬವಾಗಿದೆ ಇದ-ಕ್ಕೆ ಅವಾಮಿ ಹಬ್ಬ ಅಂತಲೂ ಹೇಸರು ಹಳ್ಳಿಗಳಲ್ಲಿ ಈ ಹಬ್ಬವನ್ನು ಉತ್ಸಾಹದಿಂದ ಆಚರಿಸುತ್ತಾರೆ

## ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಹೆಚ್ಚಿನ ಜನರನ್ನು ಸೇರಿಸಬೇಕು: ಸಚಿವ ಶಿವರಾಜ್ ಎಸ್. ತಂಗಡಗಿ



**ಕೊಪ್ಪಳ:** ಮುಖ್ಯಮಂತ್ರಿಗಳು ಹಾಗೂ ಉಪ ಮುಖ್ಯಮಂತ್ರಿಗಳು ಆಗಸ್ಟ್ 4 ರಂದು ಕೊಪ್ಪಳ ಜಿಲ್ಲೆಯ ವಿವಿಧ ಕಾರ್ಯಕ್ರಮಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಮತ್ತು ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸುವ ಕಾರ್ಯಕ್ರಮಕ್ಕೆ ಆಗಮಿಸುವ ಹಿನ್ನೆಲೆಯಲ್ಲಿ ಹೆಚ್ಚಿನ ಜನರನ್ನು ಸೇರಿಸಬೇಕೆಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ಎಸ್. ತಂಗಡಗಿ ಹೇಳಿದರು.

ಆಗಸ್ಟ್ 04 ರಂದು ಮುಖ್ಯಮಂತ್ರಿಗಳು ಕೊಪ್ಪಳ ಜಿಲ್ಲೆಗೆ ವಿವಿಧ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಮತ್ತು ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಲು ಆಗಮಿಸುತ್ತಿರುವ ಹಿನ್ನೆಲೆಯಲಿ ಅವರು ಸೋಮವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳಿಗೆ ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು. ಕೊಪ್ಪಳ ಜಿಲ್ಲೆಯ 7 ತಾಲ್ಲೂಕುಗಳ 5 ವಿಧಾನಸಭಾ ಕ್ಷೇತ್ರಗಳಿಂದ ಒಂದು ಲಕ್ಷ ಫಲಾನುಭವಿಗಳನ್ನು ಕರೆತರಬೇಕು. ದೊಡ್ಡ ಕಾರ್ಯಕ್ರಮ ಆಗಿರುವುದರಿಂದ ಯಾವುದೇ ಸಮಸ್ಯೆಗಳಾಗದಂತೆ ಅಧಿಕಾರಿಗಳು ನೋಡಿಕೊಳ್ಳಬೇಕು. ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರು, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇರಿದಂತೆ ಇತರೆ ಸಂಬಂಧಿಸಿದ ಅಧಿಕಾರಿಗಳು ಸಭೆ ನಡೆಸಿ ಫಲಾನುಭವಿಗಳ ಪಟ್ಟಿ ತಯಾರಿಸಿ ಅವರನ್ನು ಕಾರ್ಯಕ್ರಮಕ್ಕೆ ಕರೆತರಬೇಕೆಂದರು.

ಮಳೆಗಾಲ ಇರುವುದರಿಂದ ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಜರ್ಮನ್ ಟೆ-ಂಟ್ ಹಾಕಬೇಕು ಮತ್ತು ಕಾರ್ಯಕ್ರಮಕ್ಕೆ ಬರುವ ಜನರಿಗೆ ಅನುಕೂಲವಾಗಲು ಹೆಚ್ಚಿನ ಸಂಖ್ಯೆಯಲ್ಲಿ ಕುರ್ಚಿಗಳನ್ನು ಹಾಕುವ ವ್ಯವಸ್ಥೆ ಮಾಡಬೇಕು. ಅಧಿಕಾರಿಗಳು ತಮ್ಮ- ತಮ್ಮ ಇಲಾಖೆಯಲ್ಲಿರುವ ಯಾವುದೇ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಮತ್ತು ಫಲಾನುಭವಿಗಳ ಪಟ್ಟಿಯನ್ನು ನೀಡಬೇಕು. ಮುಂದಿನ ಮತ್ತೊಂದು ಸಭೆ ಕರೆಯುವುದರೊಳಗೆ ತಾವು ಎಲ್ಲಾ ಮಾಹಿತಿ ನೀಡಬೇಕೆಂದರು. ವಿವಿಧ ಇಲಾಖೆಯ ಫಲಾನುಭವಿಗಳು ಮತ್ತು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮಕ್ಕೆ ಕರೆ ತರಬೇಕು. ಅವರನ್ನು ಕರೆತರಲು ಬಸ್ಸುಗಳ ವ್ಯವಸ್ಥೆ ಮಾಡಬೇಕು. ನಮ್ಮ ಜಿಲ್ಲೆಯ ಬಸ್ಸುಗಳು ಸಾಲದಿದ್ದರೆ ಅಕ್ಕ- ಪಕ್ಕದ ಜಿಲ್ಲೆಯ ಬಸ್ಸುಗಳನ್ನು ತರಿಸಬೇಕು. ಒಂದೊಂದು ಬಸ್ಸಿಗೆ ಜನರನ್ನು ಕರೆತರಲು ಆಯಾ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನಿಯೋಜನೆ ಮಾಡಬೇಕು. ವಿವಿಧ ಇಲಾಖೆಯ ಕಾರ್ಯಕ್ರಮಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಒಂದೇ ಸಲ ಮಾಡುವುದರಿಂದ ನಮ್ಮ ಜಿಲ್ಲೆಯಿಂದ ದೊಡ್ಡ ಸಂದೇಶ ಹೋದಂತಾಗುತ್ತದೆ ಎಂದು ಹೇಳಿದರು.

ವಿವಿಧ ಇಲಾಖೆಯ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕಾಮಗಾರಿಗಳು, ಜಿಲ್ಲೆಯ ವಿವಿಧ ತಾಲ್ಲೂಕಿನ ಪ್ರಜಾಸೌಧ, ಆಸ್ಪತ್ರೆ ಸೇರಿದಂತೆ ಹಲವಾರು ಕಾರ್ಯಕ್ರಮ ಇರುವುದರಿಂದ ಎಲ್ಲಾ ಇಲಾಖೆಯ ಅಧಿಕಾರಿಗಳು ಸಂಬಂಧಪಟ್ಟವರ ಜೊತೆಗೆ ಮಾತನಾಡಬೇಕು. ಕಾರ್ಯಕ್ರಮದ ಯಶಸ್ಸಿಗೆ ವಿವಿಧ ಸಮಿತಿಗಳನ್ನು ರಚಿಸಿ ಅಧಿಕಾರಿಗಳಿಗೆ ಜವಾಬ್ದಾರಿ ನೀಡಬೇಕು. ನಮ್ಮ ಕಲ್ಯಾಣ ಕರ್ನಾಟಕ ಭಾಗದ ಸಚಿವರು ಈ ಕಾರ್ಯಕ್ರಮದಲ್ಲಿ ಭಾಗವಹಿಸುವುದರಿಂದ ಅಚ್ಚುಕಟ್ಟಾಗಿ ಕಾರ್ಯಕ್ರಮ ಮಾಡಬೇಕೆಂದು ಹೇಳಿದರು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ರಾಘವೇಂದ್ರ ಹಿಟ್ನಾಳ ಮಾತನಾಡಿ, ಕಾರ್ಯಕ್ರಮಕ್ಕೆ ಆಗಮಿಸುವ ಫಲಾನುಭವಿಗಳ ಪಟ್ಟಿಯನ್ನು ಪ್ರತಿ ಗ್ರಾಮ ಪಂಚಾಯತಿಯಿಂದ ಮಾಡಬೇಕು. ಕಾರ್ಯಕ್ರಮಕ್ಕೆ ಬರಲು ಎಷ್ಟು ಬಸ್ಸುಗಳು ಬೇಕಾಗುತ್ತವೆ ಎಂದು ಮುಂಚಿತವಾಗಿ ಪಟ್ಟಿ ತಯಾರಿಸಿರಬೇಕು. ಜನರನ್ನು ಕ-ರೆದುಕೊಂಡು ಹೋಗಿ ಬರಲು ಪ್ರತಿ ಬಸ್ಸಿಗೆ ಒಬ್ಬರನ್ನು ನಿಯೋಜನೆ ಮಾಡಬೇಕೆಂದು ಹೇಳಿದರು.

ಈ ಸಭೆಯಲ್ಲಿ ಕೊಪ್ಪಳ ಸಂಸದರಾದ ಕೆ. ರಾಜಶೇಖರ ಹಿಟ್ನಾಳ, ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಟಿ. ಲಿಂಗರಾಜು, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ಹೇಮಂತ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ, ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರುದ್ರೇಶಪ್ಪ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂಜೀವಿನಿ ಮಾಸಿಕ ಸಂತೆ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ

**ಕೊಟ್ಟೂರು:** ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕೌಶಲ್ಯ ಅಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಂಜೀವಿನಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ. ಜಿಲ್ಲಾ ಪಂಚಾಯಿತಿ ವಿಜಯನಗರ ತಾಲೂಕು ಪಂಚಾಯಿತಿ ಕೊಟ್ಟೂರು ಇವರ ಸಹಕಾರದೊಂದಿಗೆ ಭಾರತಾಂಬೆ ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟ ಉಜ್ಜಿನಿ ಗ್ರಾಮ ಪಂಚಾಯಿತಿ ತಾಲೂಕು ವಿಜಯನಗರ ಜಿಲ್ಲೆ. ಸಂಜೀವಿನಿ ಮಾಸಿಕ ಸಂತೆ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ ದಿನಬಳಕೆ ವಸ್ತುಗಳು ಆಹಾರ ಪದಾರ್ಥಗಳು ಕರಕುಶಲ ಗೃಹ



ಉಪಯೋಗ ವಸ್ತುಗಳು ಮತ್ತು ಈ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿದ್ದು ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ರೇವಣ್ಣ ಪುಷ್ಪಾವತಿ ಇವರಿಂದ ಉದ್ಘಾಟನೆ ಕಾರ್ಯಕ್ರಮ ನೆರವೇರಿಸಿದೆ. ಈ ಕಾರ್ಯಕ್ರಮಕ್ಕೆ ಆಗಮಿಸಿದವರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಉಮಾಪತಿ ಸರ್ ಇವರಿಗೆ ಪುಷ್ಪ ಕೊಡುವುದರ ಮೂಲಕ ಸ್ವಾಗತಿಸಲಾಗಿದೆ . ಗ್ರಾಮ ಪಂಚಾಯತಿ ಸದಸ್ಯರಾದ ಸಿದ್ದೇಶ್ ಲೋಕಪ್ಪ ಮರಿಯಪ್ಪ ಪರಶಪ್ಪ ಹುಲುಗಪ್ಪ ಪರುಶಪ್ಪ ಇವರು ಸಹ ಆಗಮಿಸಿದರು. ಭಾರತಾಂಬೆ ಸಂಜೀವಿನಿ ಜೀಪಿಎಫ್ ಅಧ್ಯಕ್ಷರು ಸಾವಿತ್ರ ಕಾರ್ಯದರ್ಶಿ ಭಾಗ್ಯಲಕ್ಷ್ಮಿ ಖಜಾಂಚಿ ಲೀಲಾವತಿ ಅವರ ಆಗಮಿಸಿದ್ದರು. ಈ ಕಾರ್ಯಕ್ರಮಕ್ಕೆ ತಾಲೂಕು ಪಂಚಾಯಿತಿ ಮೇಲ್ವಿಚಾರಕರಾದ ನಿಂಗೇಶ್ ಆಗಮಿಸಿದ್ದರು ಹಾಗೂ ನಮ್ಮ ಎನ್ ಆರ್ ಎಲ್ ಎಂ ನ ಸಿಬ್ಬಂದಿಗಳಾದ ಎಂಪಿಕೆ.ಎಲ್ ಸಿಆರ್‌ಪಿ. ಎಫ್‌ಎಲ್‌ಸಿ ಆರ್‌ಪಿ.ಕೆ ಎಸ್‌ಪಿಎಸ್ ಹಾಗೂ ಎಲ್ಲಾ ಸಂಘದ ಸದಸ್ಯರು ಭಾಗವಹಿಸಿದರುಗ್ರಾಮದ ಸಾರ್ವಜನಿಕರಿಗೆ ಆಗಮಿಸಿದ್ದರು

## ಹಿರೇವಂಕಲಕುಂಟಾ ನೂತನ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಉದ್ಘಾಟನೆ

### ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ನಮ್ಮ ಮುಖ್ಯ ಉದ್ದೇಶ – ಸಚಿವ ಎಸ್.ಮಧು ಬಂಗಾರಪ್ಪ

ಕೊಪ್ಪಳ: ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಬೇಕೆಂಬುದು ನಮ್ಮ ಸರ್ಕಾರದ ಮುಖ್ಯ ಉದ್ದೇಶವಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವರಾದ ಎಸ್.ಮಧು ಬಂಗಾರಪ್ಪ ಹೇಳಿದರು.

ಅವರು ಸೋಮವಾರ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಹಿರೇವಂಕಲಕುಂಟಾ ಗ್ರಾಮದಲ್ಲಿನ ನೂತನ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕಟ್ಟಡ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಶಿಕ್ಷಣ ಇಲಾಖೆಯಲ್ಲಿ ಸಾಕಷ್ಟು ಕೆಲಸಗಳು ಆಗುತ್ತಿವೆ. ರಾಜ್ಯ ಸರ್ಕಾರ ಮತ್ತು ಅಜೀಮ್ ಪ್ರೇಮಜಿ ಫೌಂಡೇಶನ್ ಸಹಯೋಗದಲ್ಲಿ ಸರ್ಕಾರಿ ಶಾಲಾ ಮಕ್ಕಳಿಗೆ ವಾರದಲ್ಲಿ ಆರು ದಿನ ಮೊಟ್ಟೆ ಮತ್ತು ಬಾಳೆ ಹಣ್ಣುಗಳನ್ನು ವಿತರಣೆ ಮಾಡಲಾಗುತ್ತಿದೆ. ಇದರ ಜೊತೆಗೆ ಮಕ್ಕಳಿಗೆ ಬಿಸಿಊಟ, ಹಾಲು, ಪಠ್ಯ ಪುಸ್ತಕ, ಸಮವಸ್ತ್ರದೊಂದಿಗೆ ಶೂಗಳು ಮತ್ತು ಸಾಕ್ಸ್ ಹಾಗೂ ವಿಶೇಷವಾಗಿ ಮಕ್ಕಳ ಪೌಷ್ಠಿಕ ಬೆಳವಣಿಗೆಗೆ ರಾಗಿ ಮಾಲ್ಟ್ ಕೊಡಲಾಗುತ್ತಿದೆ. ಒಂದು ಸಮೀಕ್ಷಾ ವರದಿ ಪ್ರಕಾರ ರಾಜ್ಯದಲ್ಲಿ ಕಳೆದ ಎರಡು ಮೂರು ವರ್ಷಗಳಲ್ಲಿ ಮಕ್ಕಳ ಪೌಷ್ಠಿಕತೆ ಉನ್ನತ ಸ್ಥಾನವನ್ನು ಪಡೆದಿದೆ. ಉತ್ತಮ ಶಿಕ್ಷಕರು ಸರ್ಕಾರಿ ಶಾಲೆಗಳಲ್ಲಿದ್ದು, ಇಲ್ಲಿ ಓದುವ ಮಕ್ಕಳೆಲ್ಲ ಪುಣ್ಯವಂತರು. ಸರ್ಕಾರಿ ಶಾಲೆಗಳಲ್ಲಿ ಓದಿದವರೆಲ್ಲ ಉನ್ನತ ಸ್ಥಾನಗಳಲ್ಲಿದ್ದಾರೆ. ಇಂದಿನ ನಮ್ಮ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಸಹ ಓದಿರುವುದು ಒಂದು ಸರ್ಕಾರಿ ಶಾಲೆಯಲ್ಲಿಯೆ. ಸರ್ಕಾರಿ ಶಾಲೆಗಳ ಮಕ್ಕಳು ಚೆನ್ನಾಗಿ ಓದಿ ಬುದ್ದಿವಂತರಾಗಬೇಕು. ನಮ್ಮ ಸರ್ಕಾರ ಬಂದ ನಂತರ ಕೇವಲ 11



ತಿಂಗಳಲ್ಲಿ 12,500 ಶಿಕ್ಷಕರನ್ನು ನೇಮಕ ಮಾಡಲಾಗಿದೆ. ಹಂತ ಹಂತವಾಗಿ ಶಿಕ್ಷಕರ ಕೊರತೆಯನ್ನು ನೀಗಿಸಲಾಗುವುದು. ಮಕ್ಕಳ ಭವಿಷ್ಯಕ್ಕಾಗಿ ಬೇಕಾಗುವ ಶಿಕ್ಷಣದ ಸೌಲಭ್ಯಗಳನ್ನು ಒದಗಿಸಲು ನಮ್ಮ ಸರ್ಕಾರವು ಬದ್ಧವಾಗಿದೆ ಎಂದರು.

ಮಕ್ಕಳ ಸೇವೆ ಮಾಡಲು ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿಗಳು ನನಗೆ ಶಿಕ್ಷಣ ಇಲಾಖೆಯನ್ನು ನೀಡಿ-ದ್ದಾರೆ. ರಾಜ್ಯದಲ್ಲಿ ಕೆ.ಪಿ.ಎಸ್. ಶಾಲೆಗಳನ್ನು ಪ್ರಾರಂಭಿಸಲಿದ್ದೇವೆ ಹಾಗೂ ಅವಶ್ಯವಿರುವಲ್ಲಿ ಹೈಸ್ಕೂಲ್ ಮತ್ತು ಪಿಯುಸಿ ಕಾಲೇಜುಗಳನ್ನು ಮಾಡಿಕೊಡಲಾಗುವುದು. ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುಧಾನದಲ್ಲಿ ಶೇ. 25ರಷ್ಟನ್ನು ಶಿಕ್ಷಣಕ್ಕಾಗಿಯೇ ಮೀಸಲಿಡಲಾಗಿದೆ. ಪರೀಕ್ಷೆಯಲ್ಲಿ ಕಾಪಿ ಮಾಡುವುದನ್ನು ತಡೆಯಲು ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದ್ದು, ಇದರಿಂದ ಕೆಲ ಮಕ್ಕಳು ಫೇಲ್ ಆಗುತ್ತಿರಬಹುದು. ಆದರೆ, ಭವಿಷ್ಯದಲ್ಲಿ ಮಕ್ಕಳು ಯಾವುದೇ ರೀತಿಯಲ್ಲಿ ಸೋಲುವುದಿಲ್ಲ. ಮೂರು ಪರೀಕ್ಷಾ ಸೂತ್ರವನ್ನು ಜಾರಿಗೆ ತರಲಾಗಿದ್ದು, ಈ ವ್ಯವಸ್ಥೆಯ ಮಹತ್ವವು ಮುಂಬರುವ ದಿನಗಳಲ್ಲಿ ತಿಳಿಯಲಿದೆ. ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಮಕ್ಕಳಲ್ಲಿ 84,400 ಕ್ಕಿಂತಲು ಹೆಚ್ಚು ಮಕ್ಕಳು ಎಸ್.ಎಸ್.ಎಲ್.ಸಿ ಪರೀಕ್ಷೆ-2ರಲ್ಲಿ ಉತ್ತೀರ್ಣರಾಗಿ ಶಿಕ್ಷಣ ಇಲಾಖೆಯ ಗೌರವನ್ನು ಹೆಚ್ಚಿಸಿದ್ದಾರೆ. ಇದರಲ್ಲಿ ಸರ್ಕಾರಿ ಶಾಲೆಗಳು ಮೊದಲ ಸ್ಥಾನದಲ್ಲಿದ್ದು, ಅನುದಾನಿತ ಮತ್ತು ಖಾಸಗಿ ಶಾಲೆಗಳು 2ನೇ ಮತ್ತು 3ನೇ ಸ್ಥಾನದಲ್ಲಿವೆ. ಸದ್ಯ

## ವರದಿಗಾರರಾಗಿ ನೇಮಕ



ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ತುಂಗಾಕಿರಣ ದಿನ ಪತ್ರಿ-ಕೆಗೆ ಸುದ್ದಿ ಹಾಗೂ ಜಾಹಿರಾತಿಗಾಗಿ ಯಲಬುರ್ಗಾ ವರದಿಗಾರರಾದ ಎಸ್. ಕೆ.ದಾನಕೈ ಇವರನ್ನು ಸಂಪರ್ಕಿಸಿರಿ ಮೊ; 9972325690

## ವರದಿಗಾರರಾಗಿ ನೇಮಕ



ಶ್ರೀ ಉಮೇಶ ಹಿಟ್ನಾಳ ಇವರನ್ನು ಕೊಪ್ಪಳ ನಗರ ವರದಿಗಾರನ್ನಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ. ಓದುಗರು, ಜಾಹಿರಾತುದಾರರು ಸಹಕರಿಸಬೇಕಾಗಿ ವಿನಂತಿ

## ವರದಿಗಾರರಾಗಿ ನೇಮಕ



ಶ್ರೀ ದೇವದಾನಂ ಇವರನ್ನು ಗಂಗಾವತಿ ನಗರ ವರದಿಗಾರನ್ನಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ. ಓದುಗರು, ಜಾಹಿರಾತುದಾರರು ಸಹಕರಿಸಬೇಕಾಗಿ ವಿನಂತಿ

## ವರದಿಗಾರರಾಗಿ ನೇಮಕ



ಶ್ರೀ ಗ್ಯಾನಪ್ಪ ಇವರನ್ನು ಸಿಂಧನೂರು ನಗರ ವರದಿಗಾರನ್ನಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ. ಓದುಗರು, ಜಾಹಿರಾತುದಾರರು ಸಹಕರಿಸಬೇಕಾಗಿ ವಿನಂತಿ

## ವರದಿಗಾರರಾಗಿ ನೇಮಕ



ಶ್ರೀ ರವಿ ತಳವಾರ ಇವರನ್ನು ಜೇವರ್ಗಿ ತಾಲೂಕಾ ವರದಿಗಾರನ್ನಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ. ಓದುಗರು, ಜಾಹಿರಾತುದಾರರು ಸಹಕರಿಸಬೇಕಾಗಿ ವಿನಂತಿ

## ಇಲ್ಲಿ ನೀವು ಬರೆಯಬಹುದು

* ಸಣ್ಣ ಕಥೆ, ಕವನ, ಹನಿಗವನ ಲೇಖನಗಳನ್ನು ಕಳಿಸಬಹುದು. * ಯೋಗ್ಯ ಅನಿಸಿದಲ್ಲಿ ಪ್ರಕಟಿಸ ಲಾಗುವುದು.

* ಸಾಹಿತ್ಯಿಕ, ವೈಚಾರಿಕ, ಧಾರ್ಮಿಕ, ಶೈಕ್ಷಣಿಕ ಮತ್ತು ರಾಜಕೀಯ ವಿಶ್ಲೇಷಣೆ ಲೇಖನಗಳಿಗೆ ಆದ್ಯತೆ.

* ಶಾಲೆ, ಕಾಲೇಜುಗಳ ವಿದ್ಯಾರ್ಥಿಗಳ ಬರಹಗಳಿಗೆ ಅವಕಾಶವಿದೆ.

*ಲೇಖನಗಳನ್ನು ಕಳಿಸುವವರು ತಮ್ಮ ಸಂಪೂರ್ಣ ವಿಳಾಸ, ದೂರವಾಣಿ ಸಂಖ್ಯೆ ಇರಲಿ. ಜೊತೆಗೆ ಆಧಾರ ಕಾರ್ಡ ಜರಾಕ್ಸ ಒಂದು ಪೋಟೋ ಕಳಿಸಬೇಕು. * ಓದುಗರು ಯೋಗ್ಯ ಸಲಹೆ, ಸೂಚನೆಗಳನ್ನು ನೀಡಬಹುದು. * ಪತ್ರಿಕೆಯಲ್ಲಿಯ ಲೇಖನಗಳ ವಿಚಾರಗಳಿಗೆ ಲೇಖಕರೇ ಜವಾಬ್ದಾರರು.

## ಯುವ ಸ್ಫೂರ್ತಿ



ಹವ್ಯಾಸಿ
ಬರಹಗಾರ

ದೇವರಾಜ ಗುಡದಳ್ಳಿ
ಚಾಮಲಾಪೂರ, ಗಂಗಾವತಿ

## ವರದಿಗಾರರಾಗಿ ನೇಮಕ



ಶ್ರೀ ಎಂ.ಡಿ ಇಸ್ಮಾಯಿಲ್ ಇವರನ್ನು ಲಿಂಗಸಗೂರು ತಾಲೂಕಾ ವರದಿಗಾರನ್ನಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ. ಓದುಗರು, ಜಾಹಿರಾತುದಾರರು ಸಹಕರಿಸಬೇಕಾಗಿ ವಿನಂತಿ

## ಓದುಗರ ಗಮನಕ್ಕೆ....

ಹೊಸದಾಗಿ ಪತ್ರಿಕೆಯಲ್ಲಿ ಕೆಲಸ ಮಾಡಲು ಆಸಕ್ತರು ಕೊಪ್ಪಳ, ಬಳ್ಳಾರಿ, ರಾಯಚೂರು, ವಿಜಯನಗರ ಮತ್ತು ಗದಗ ಜಿಲ್ಲೆಗಳ ಜಿಲ್ಲಾ ಮತ್ತು ತಾಲೂಕಾ ವರದಿಗಾರರು ಬೇಕಾಗಿದ್ದಾರೆ. ಅಗತ್ಯ ದಾಖಲೆಗಳೊಂದಿಗೆ ನೇರವಾಗಿ ಸಂಪರ್ಕಿಸಬಹುದು.

ಸಂಪಾದಕರು: 9986873183

## ಯುವ ಸ್ಫೂರ್ತಿ



ಸಂಸ್ಕೃತ ಅಧ್ಯಾಪಕರು
gavisiddesh48@gmail.com

ಗವಿಸಿದ್ದೇಶ್.ಕೆ, ಗಂಗಾವತಿ
ಅಧ್ಯಾಪಕರು, ಬೆಂಗಳೂರು

# ವಚನ ಬದುಕಿನ ಮೌಲ್ಯ:ಜಿ.ಎಸ್.ಗೋನಾಳ



ಕೊಪ್ಪಳ ಜು 6: ವಚನ ಸಾಹಿತ್ಯ ಬದುಕಿನ ಮೌಲ್ಯವನ್ನು ಹೆಚ್ಚಿಸುವ ದಿವ್ಯ ಔಷಧಿಯಾಗಿದೆ ಎಂದು ವಚನ ಸಾಹಿತ್ಯ ಪರಿಷತ್ತು ಕೊಪ್ಪಳ ಜಿಲ್ಲಾ ಘಟಕದ ಅಧ್ಯಕ್ಷ ಜಿ.ಎಸ್.ಗೋನಾಳ ಹೇಳಿದರು. ವಚನ ಸಾಹಿತ್ಯ ಪರಿಷತ್ತು ಕೊಪ್ಪಳ ತಾಲೂಕು ಘಟಕ ಅಧ್ಯಕ್ಷ ಭಾಗ್ಯನಗರದ ಶಿಕ್ಷಕ ಮೈಲಾರಪ್ಪ ಉಂಕಿ ಅವರ ಸದನದಲ್ಲಿ ಆಯೋಜಿಸಿದ್ದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮುಂದುವರೆದು ಮಾತನಾಡಿದ ಅವರು ಜಿಲ್ಲೆಯ ಪ್ರತಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಬೆಳಗಿನ ಜಾವ ನಡೆಯುವ ಪ್ರಾರ್ಥನೆಯಲ್ಲಿ ಒಂದು ವಚನವನ್ನು ಮಕ್ಕಳ ಬಾಯಲ್ಲಿ ಹೇಳಿಸುಂತಾಗಬೇಕು. ಆ ದಿಸೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಕ್ರಮ ಕೈಗೊಳ್ಳಲು ಅವರು ಮನವಿ ಮಾಡಿದರು.

ಬಸವಾನುಯಾಯಿ ವೈ. ಎಚ್ ಹಳ್ಳಿಕೇರಿ ಮಾತನಾಡಿ ಜಗತ್ತಿಗೆ ಸಾಮಾಜಿಕ ನ್ಯಾಯ ಕೊಟ್ಟ ಬಸವಣ್ಣನು ನಿಜವಾದ ಸಾಮಾಜಿಕ ನ್ಯಾಯದ ಹರಿಕಾರ ಎಂದು ಅಭಿಪ್ರಾಯ ಪಟ್ಟರು. ಸಭೆಯಲ್ಲಿ ಉಪಸ್ತಿತರಿದ್ದ ಸಾಹಿತಿ ಶಿ.ಕಾ. ಬಡಿಗೇರ ಪ್ರತಿ ತಿಂಗಳು ವಚನ ಗೋಷ್ಟಿ, ವಚನ ವಾಚನ ಕಾರ್ಯಕ್ರಮ ಹಮ್ಮಿಕೊಳ್ಳಲು ಸಲಹೆ ನೀಡಿದರು.

ಹಿರಿಯ ಮಕ್ಕಳ ಸಾಹಿತಿ ಎ. ಪಿ ಅಂಗಡಿ, ಗವಿಸಿದ್ದಪ್ಪ ಬಾರ-ಕೇರ, ಸುರೇಶ ಕುಂಬಾರ ಹಾಗೂ ಪ್ರದೀಪ ಹದ್ದಣ್ಣವರ ವಚನಕಾರರ ಒಂದೊಂದು ವಚನ ಓದಿದರು. ಇದೇ ಸಂದರ್ಭದಲ್ಲಿ ಮೈಲಾರಪ್ಪ ಉಂಕಿ ದಂಪತಿಗಳನ್ನು ಸನ್ಮಾನಿಸಲಾಯಿತು.

# ನರೇಗಾ ನೌಕರರಿಗೆ ಆರು ತಿಂಗಳ ವೇತನ ಪಾವತಿಸುವಂತೆ ಒತ್ತಾಯ

**ಕಂಪ್ಲಿ:** ನರೇಗಾ ನೌಕರರಿಗೆ ಆರು ತಿಂಗಳ ವೇತನ ಪಾವತಿಸುವಂತೆ ಒತ್ತಾಯಿಸಿ ನರೇಗಾ ನೌಕರರು ಶನಿವಾರ ಇಲ್ಲಿನ ತಾಪ ಇ ಓ ಕೆ.ಶ್ರೀಕುಮಾರ್ ಮತ್ತು ನರೇಗಾ ಎಡಿ ಕೆ.ಎಸ್.ಮಲ್ಲನಗೌಡರಿಗೆ ಮನವಿ ಸಲ್ಲಿಸಿದರು.

ಜಿಲ್ಲಾ ಸಂಘಟನಾ ಕಾರ್ಯದರ್ಶಿ ಎಚ್. ಹನುಮೇಶ್ ಮಾತನಾಡಿ, ತಾಪಂ.ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನರೇಗಾ ನೌಕರರಿಗೆ ಕಳೆದ ಆರು ತಿಂಗಳಿಂದ ವೇತನ ಪಾವತಿಯಾಗಿಲ್ಲ. ಇದರಿಂದ ಆರೋಗ್ಯ ವೆಚ್ಚ, ಮಕ್ಕಳ ಶಾಲಾ ಶುಲ್ಕ, ಇಎಂಐ ಪಾವತಿ ಸೇರಿ ನಿತ್ಯ ಜೀವನ ನಿರ್ವಹಣೆ ಕಷ್ಟಕರವಾಗಿದೆ. ಕೂಡಲೇ ವೇತನ ಬಿಡುಗಡೆಗೊಳಿಸಬೇಕು. ತಪ್ಪಿದಲ್ಲಿ ಜು.7ರಿಂದ ನರೇಗಾ ಯೋಜನೆಯ ಕಾರ್ಯಗಳನ್ನು ಸ್ಥಗಿತಗೊಳಿಸಿ ಅಸಹಕಾರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಮನವಿ ಸಲ್ಲಿಸುವಲ್ಲಿ ನರೇಗಾ ನೌಕರರ ಜಿಲ್ಲಾ ಪ್ರಧಾನ ಕಾರ್ಯದರ್ಶಿಸಂಗಮೇಶ್, ಎಂ.ಐ.ಎಸ್.ಸಂಯೋಜಕ ಬಿ.ಸಿದ್ದೇಶ್ವರ, ತಾಂತ್ರಿಕ ಸಹಾಯಕರಾದ ಐಶ್ವರ್ಯ, ತಿಪ್ಪೇಶ್, ಲೋಕೇಶ್, ಬಸವರಾಜ, ಆಂಜಿನೇಯ, ಬಿ.ಎಫ್. ಟಿಗಳಾದ ಚನ್ನವೀರ, ಭಾಷಾ, ಪಂಪಾಪತಿ, ಜಿ.ಕೆ. ಎಂ.ಗಳಾದ, ಶಿಲ್ಪಾ, ಹೊನ್ನೂರಮ್ಮ, ಮಂಜುಳಾ, ಸುಣಗಾರ ರೇಣುಕಮ್ಮ, ರಂಜನಿ ಹಾಗೂ ನರೇಗಾ ನೌಕರರ ಒಕ್ಕೂಟದ ಹೋರಾಟಕ್ಕೆ ತಾಪಂ.ಸಹಾಯಕ ಲೆಕ್ಕಧಿಕಾರಿ ನಾರಾಯಣಸ್ವಾಮಿ, ಸರ್ಕಾರಿ ನೌಕರರ ಸಂಘದ ಗೌರವಾಧ್ಯಕ್ಷ ಕೆ.ಹನುಮಂತಪ್ಪ, ತಾಪಂ.ವ್ಯವಸ್ಥಾಪಕಿ ಅಪಾರಂಜಿ ವಿಷಯ ನಿರ್ವಾಹಕರಾದ ಬಂಡಾರಿ ಸುರೇಶ, ಮಂಜುಳಾ,ಅಕ್ಕನಾಗಮ್ಮ, ಮನೋಜ್ ಬೆಂಬಲ ವ್ಯಕ್ತಪಡಿಸಿದರು.




ಕಂಪ್ಲಿ: ನರೇಗಾ ನೌಕರರಿಗೆ ಆರು ತಿಂಗಳ ವೇತನ ಪಾವತಿಸುವಂತೆ ಒತ್ತಾಯಿಸಿ ನರೇಗಾ ನೌಕರರು ಶನಿವಾರ ಇಲ್ಲಿನ ತಾಪ ಇ ಓ ಕೆ.ಶ್ರೀಕುಮಾರ್ ಮತ್ತು ನರೇಗಾ ಎಡಿ ಕೆ.ಎಸ್.ಮಲ್ಲನಗೌಡರಿಗೆ ಮನವಿ ಸಲ್ಲಿಸಿದರು.

**ಪತ್ರಿಕಾ ಪ್ರಕಟಣೆಗಾಗಿ**
**ಮಾನ್ಯ ಗೌರವಾನ್ವಿತ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕಾರಟಗಿ ಇವರ ಸಮಕ್ಷಮದಲ್ಲಿ**
**ಕ್ರಿಮಿನಲ್ ಮಿಸಿಲೇನಿಯಸ್ ಸಂಖ್ಯೆ: 457/2025**

**ಅರ್ಜಿದಾರರು** :1) ಶ್ರೀಮತಿ ಗಂಗಮ್ಮ ಗಂಡ ದಿ ಲಚಮಪ್ಪ ವಯಸ್ಸು: 69 ವರ್ಷ, ಉದ್ಯೋಗ: ಮನೆಗೆಲಸ, ಸಾ: ವಾರ್ಡ.ನಂ.02, ಚಳ್ಳೂರು ತಾ: ಕಾರಟಗಿ, ಜಿ: ಕೊಪ್ಪಳ ಇತರರು ಅರ್ಜಿದಾರರು ನಂ.2 ಮತ್ತು 3.

**ಎದುರುದಾರರು:** ಜನನ ಮರಣ ನೋಂದಣಾದಿ಼ಕಾರಿಗಳು, ತಹಶೀಲ್ದಾರರು, ತಹಶೀಲ್ ಕಾರ್ಯಾಲಯ, ಕಾರಟಗಿ. ಈ ಮೇಲೆ ತಿಳಿಸಿದ ಅರ್ಜಿದಾರರು ಕರ್ನಾಟಕ ಜನನ ಮರಣ ನೋಂದಣಿ ಕಾಯ್ದೆ 1969 ರ ಕಲಂ 13(3) ನಿಯಮ 9 (3) ಮತ್ತು ಕೆ.ಆರ್. & ಡಿ ನಿಯಮಗಳು 1999 ರ ಅಡಿಯಲ್ಲಿ ಅರ್ಜಿದಾರರ ಮೃತರಾದ ದಿ॥ಲಚಮಪ್ಪ ತಂದೆ ಯಂಕಪ್ಪ ಖ್ಯಾಡೆದ್ ಇವರ ಮರಣ ನೋಂದಣಿಗಾಗಿ ಕೋರಿ ಅರ್ಜಿ ಸಲ್ಲಿಸಿದ್ದು, ಅರ್ಜಿದಾರರು ನಂ.01 ರವರು ಮೃತರಿಗೆ ಹೆಂಡತಿಯಾಗಿದ್ದು, ಅರ್ಜಿದಾರರು ನಂ.02 ರಿಂದ 03 ರವರು ಮಕ್ಕಳಾಗಿದ್ದು, ಅರ್ಜಿದಾರರ ನಂ.01 ರವರ ಗಂಡನಾದ ದಿ ಲಚಮಪ್ಪ ತಂದೆ ಯಂಕಪ್ಪ ಖ್ಯಾಡೆಡ್ ಇವರ ಮರಣ ದಿನಾಂಕ: 02/11/2007 ರಂದು ಕೊಪ್ಪಳ ಜಿಲ್ಲೆಯ ಕಾರಟಗಿ ತಾಲ್ಲೂಕಿನ ಚಳ್ಳೂರು ಗ್ರಾಮದ ತಮ್ಮ ಸ್ವಗೃಹದಲ್ಲಿ ಮರಣ ಹೊಂದಿದ್ದು, ಸದರಿ ಅವರ ಮರಣ ನೋಂದಣಿ ಮಾಡಲು ಹಾಗೂ ಮರಣ ಪ್ರಮಾಣ ಪತ್ರ ವಿತಲಸುವ ಸಂಬಂಧ ಎದುರುದಾರರ ಕಾರ್ಯಾಲಯಕ್ಕೆ ಆದೇಶವನ್ನು ಜಾರಿ ಮಾಡಬೇಕೆಂದು ಕೋರಿ ಅರ್ಜಿದಾರರು ನಂ.01 ರಿಂದ 03 ಇವರು ಈ ಅರ್ಜಿಯನ್ನು ದಾಖಲು ಮಾಡಿದ್ದಾರೆ. ಈ ಪ್ರಕರಣವು ದಿನಾಂಕ: 11-08-2025 ರಂದು ಮಾನ್ಯ ಗೌರವಾನ್ವಿತ ಹೆಚ್ಚುವಲ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಕ ದಂಡಾಧಿಕಾಲಗಳ ನ್ಯಾಯಾಲಯ, ಕಾರಟಗಿಯಲ್ಲಿ ಬೆಳಗ್ಗೆ 11-00 ಗಂಟೆಗೆ ವಿಚಾರಣೆ ಇದ್ದ ಪ್ರಯುಕ್ತ ಯಾರಾದರೂ ತಕರಾರು ಸಲ್ಲಿಸುವುದಿದ್ದರೆ ಈ ಮೇಲೆ ತಿಳಿಸಿದ ಮುದ್ದತ್ತಿನ ದಿನಾಂಕದಂದು ನ್ಯಾಯಾಲಯಕ್ಕೆ ಹಾಜರಾಗಿ ತಕರಾರನ್ನು ಸಲ್ಲಿಸತಕ್ಕದ್ದು. ಒಂದು ವೇಳೆ ಯಾರಿಂದಲೂ ತಕರಾರು ಬಾರದಿದ್ದ ಪಕ್ಷದಲ್ಲಿ ಮಾನ್ಯ ಘನ ನ್ಯಾಯಾಲಯವು ಈ ಪ್ರಕರಣದ ವಿಚಾರಣೆ ಅಂತಿಮ ಎಂದು ಪರಿಗಣಿಸಿ, ಅರ್ಜಿದಾರರ ಪರ ಏಕ ಪಕ್ಷೀಯ ಆದೇಶ ಹೊರಡಿಸಲಿದೆ ಎಂದು ತಿಳಿಯತಕ್ಕದ್ದು.

**ಸ್ಥಳ : ಗಂಗಾವತಿ**
**ದಿನಾಂಕ: 01/07/2025**

**ನ್ಯಾಯಾಲಯದ ಆದೇಶದ ಮೇರೆಗೆ**
**ಮುಖ್ಯ ಲಿಪಿಕಾಧೀಕಾರಿ**
**ಮಾನ್ಯ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪಂ.ದ.ನ್ಯಾ.ದಂ.ನ್ಯಾಯಾಲಯ ಕಾರಟಗಿ**

ಮುಖಾಂತರ
(ಮಂಜುನಾಥ ಪುರ್ತಗೇರಿ)
ಅರ್ಜಿದಾರರ ಪರ ವಕೀಲರು, ಗಂಗಾವತಿ

**CITATION**
**IN THE COURT OF HON'BLE I ADD CIVIL JUDGE & J.M.F.C. AT: GANGAVATHI**
**Cri .Misc. No. 560 /2025**

PETITIONERS:-1) Durugappa S/o. Nagappa, Age 39 years, Occ: Agri,
R/o 8th ward chalavadi streat Kanakagiri, Tq/Kanakagiri Dt: Koppal
2) Phakiramma W/o Nagappa
Age/43 years Occ: Household
R/o 4th ward chalavadi streat Kanakagiri, Tq/Kanakagiri Dt: Koppal
3) Shakantala W/o Hanumanta
Age: 38 years Occ: Household
R/o 3rd ward Naganakal po/ Bevinahal Tq/Karatagi Dt: Koppal

**RESPONDENT:-**
V/s
1) The registrar Births and Deaths
i.e. Town panchayat counsil Kanakagiri
2) All Concerned

Whereas above named petitioner have filed this criminal miscellaneous to seek death certificate of the mother of petitioners by name 'Bheemamma W/o Nagappa" as on "04-01-2019", at kanakagiri ta/ kanakagiri. If any concerned have objection are hereby summoned to appear before this Hon'ble court in person or by a pleader duly instructed and able to answer all material questions relating to the suit or who shall be accompanies by some person able to answer all such questions on **30-07-2025 at 11-00** AM to answer the claim you are directed to produce on that day all the documents upon which you intended to relay in support of you defense. In default of your appearance on the day afore mentioned, the said case will be heard and determined in your absence.

Given under my seal and signature of the court, this 2nd day July 2025
Place: Gangavathi
Date: 02/07/20

**Through**
**// By order of the court//**
**Chief ministerial officer**
**Civil judge JMFC court**
**GANGAVATHI**

# ಹಿರೇವಂಕಲಕುಂಟಾ ನೂತನ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಉದ್ಘಾಟನೆ

3ನೇ ಪರೀಕ್ಷೆಯು ನಡೆಯುತ್ತಿದೆ ಎಂದು ಹೇಳಿದರು.

ಇಡೀ ರಾಜ್ಯದಾದ್ಯಂತ ರೈತರ ಹೊಲಗಳು ಹಸಿರಾಗಿವೆ ಎಂಬುವುದಕ್ಕೆ ಕಾರಣ ಮಾಜಿ ಮುಖ್ಯಮಂತ್ರಿ ಎಸ್.ಬಂಗಾರಪ್ಪನವರು 36 ರಿಂದ 37 ಲಕ್ಷ ಬೋರ್ವೆಲ್‌ಗಳಿಗೆ ಉಚಿತ ವಿದ್ಯುತ್ ನೀಡಿ, ಆರ್ಥಿಕವಾಗಿ ದುಡಿಯುವ ರೈತರ ಕೈಗಳಿಗೆ ಶಕ್ತಿ ನೀಡಿದ್ದರು. ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರವು ಗೃಹಜ್ಯೋತಿ ಯೋಜನೆಯನ್ನು ಜಾರಿಗೆ ಮಾಡುವುದರ ಮೂಲಕ ಪ್ರತಿಯೊಂದು ಮನೆಗೆ ಉಚಿತ ಬೆಳಕನ್ನು ನೀಡಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಮಾತನಾಡಿ, ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರವು ಎರಡು ವರ್ಷಗಳನ್ನು ಪೂರೈಸಿದ್ದು, ಹಲವಾರು ಜನಪರವಾದ ಕಾರ್ಯಕ್ರಮಗಳನ್ನು ಜಾರಿಗೆ ಮಾಡಲಾಗಿದೆ. ವಿಶೇಷವಾಗಿ ನಮ್ಮ ಯಲಬುರ್ಗಾ ಕ್ಷೇತ್ರದಲ್ಲಿ 16 ಹೊಸ ಶಾಲೆಗಳು ಮತ್ತು 7 ಹೊಸ ಜೂನಿಯರ್ ಕಾಲೇಜುಗಳು ಪ್ರಾರಂಭವಾಗಿದ್ದು, ಇನ್ನೊಂದು ವಾರದಲ್ಲಿ ತಲಾ ಒಂದು ಹೊಸ ಹೈಸ್ಕೂಲ್ ಮತ್ತು ಜೂನಿಯರ್ ಕಾಲೇಜು ಪ್ರಾರಂಭವಾಗಲಿದೆ. ಇದರ ಜೊತೆಗೆ ವಿವಿಧ ಗ್ರಾಮಗಳಲ್ಲಿ ಕಲ್ಯಾಣ ಮಂಟಪ ನಿರ್ಮಾಣಕ್ಕೆ ಅನುದಾನ ನೀಡಲಾಗಿದೆ. ಪ್ರಾರ್ಥಮಿಕ ಆರೋಗ್ಯ ಕೇಂದ್ರಗಳನ್ನು ಸಹ ಮಂಜೂರು ಮಾಡಿಸಲಾಗಿದೆ. ಬ್ರಿಜ್ ಕಂ ಬ್ಯಾರೆಜ್ ನಿರ್ಮಾಣ, ಕೆರೆ ತುಂಬಿಸಲು ಸಹ ಅನುದಾನವನ್ನು ನೀಡಲಾಗಿದೆ. ಒಂದು ಶಾಲೆ ಪ್ರಾರಂಭಿಸಿದ ಬಳಿಕ ಶಾಲಾ ಮುಖ್ಯಗುರುಗಳು, ಶಿಕ್ಷಕರು ಮತ್ತು ಸಿಬ್ಬಂದಿಗಳಿಗೆ ವೇತನ ಸೇರಿದಂತೆ ಒಂದು ವರ್ಷಕ್ಕೆ ಸುಮಾರು 70 ರಿಂದ 75 ಲಕ್ಷಗಳು ಖರ್ಚಾಗಲಿದ್ದು, ಈ ಅನುದಾನವನ್ನು ಸರ್ಕಾರವು ನೀಡಲಿದೆ ಎಂದರು.

ಮಧು ಬಂಗಾರಪ್ಪ ಶಿಕ್ಷಣ ಮಂತ್ರಿಗಳಾದ ನಂತರ ಉತ್ತಮ ಕೆಲಸಗಳನ್ನು ಮಾಡುತ್ತಿದ್ದಾರೆ. ಗ್ರಾಮೀಣ ಭಾಗಗಳಲ್ಲಿ ಇಂಗ್ಲೀಷ್ ಮಾಧ್ಯಮ ಶಾಲೆಗಳು ಬೇಕೆಂದು ಬಹಳಷ್ಟು ಜನರು ಒತ್ತಾಯ ಮಾಡುತ್ತಿದ್ದಾರೆ. ಎಲ್.ಕೆ.ಜಿ ಯಿಂದ ಪಿ.ಯುಸಿ ವರೆಗೆ ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳನ್ನು ಮಾಡಲು ಸಚಿವರು ಬಹಳಷ್ಟು ಆಸಕ್ತಿ ವಹಿಸಿದ್ದಾರೆ. ಸರ್ಕಾರದಿಂದ 500 ಕೆ.ಪಿ.ಎಸ್ ಶಾಲೆಗಳನ್ನು ಮಂಜೂರು ಮಾಡಲಾಗಿದೆ. ಇದರ ಜೊತೆಗೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಯೋಜನೆಯಡಿ 50 ಶಾಲೆಗಳನ್ನು ಮಂಜೂರು ಮಾಡಿದ್ದು, ಇದೊಂದು ಐತಿಹಾಸಿಕ ದಾಖಲೆಯಾಗಲಿದೆ. ಪ್ರತಿ ಶಾಸಕರ ಕ್ಷೇತ್ರ-ಕ್ಕೆ 3 ಶಾಲೆಗಳನ್ನು ನೀಡುವುದಾಗಿ ಸಚಿವರು ತಿಳಿಸಿದ್ದು, ನಮ್ಮ ಯಲಬುರ್ಗಾ ಕ್ಷೇತ್ರಕ್ಕೆ 4 ಕೆ.ಪಿ.ಎಸ್ ಶಾಲೆಗಳನ್ನು ನೀಡುವಂತೆ ನಾನು ಕೇಳಿದ್ದೇನೆ. ಕೆ.ಕೆ.ಆರ್.ಡಿ.ಬಿ ಯೋಜನೆಯಡಿ ಗುನ್ನಾಳ ಮತ್ತು ಬಿನ್ನಾಳ ಗ್ರಾಮಗಳಲ್ಲಿ ಒಂದೊಂದು ಸೇರಿ ನಮ್ಮ ಕ್ಷೇತ್ರದಲ್ಲಿ ಒಟ್ಟು 6 ಕೆ.ಪಿ.ಎಸ್ ಶಾಲೆಗಳು ಮಂಜೂರಾಗಲಿವೆ. ನಮ್ಮ ಸರ್ಕಾರದಲ್ಲಿ ಯಾವುದೇ ರೀತಿಯ ಅನುದಾನದ ಕೊರತೆಯಿಲ್ಲ. ಶಿಕ್ಷಣಕ್ಕಾಗಿಯೇ ನಮ್ಮ ಸರ್ಕಾರವು ಬಜೆಟ್‌ನಲ್ಲಿ ರೂ. 42 ಸಾವಿರ ಕೋಟಿ ಅನುದಾನವನ್ನು ಮೀಸಲಿರಿಸಿದೆ ಎಂದು ಹೇಳಿದರು.

ಮಾಜಿ ಸಚಿವರಾದ ಅಮರೇಗೌಡ ಪಾಟೀಲ್ ಬಯ್ಯಾಪುರ ಅವರು ಮಾತನಾಡಿ, ಎಲ್ಲಾ ಅಭಿವೃದ್ಧಿಗಿಂತಲೂ ಶಿಕ್ಷಣದ ಅಭಿವೃದ್ಧಿ ಬಹಳ ಪ್ರಮುಖವಾದದ್ದು. ಯಾಕೆಂದರೆ ಶಿಕ್ಷಣ ಎಂಬುದು ಒಂದು ದೊಡ್ಡ ಅಸ್ತ್ರವಾಗಿದ್ದು, ಅದರ ಕುರಿತು ಪಾಲಕರು, ಪೋಷಕರು ಹಾಗೂ ಶಿಕ್ಷಕರು ಸರಿಯಾಗಿ ಮಕ್ಕಳಿಗೆ ಮಾಹಿತಿ ನೀಡಬೇಕು. ಇವತ್ತು ಮೊಬೈಲ್ ಬಂದು ಮಕ್ಕಳಲ್ಲಿ ಓದುವ ಇಚ್ಛಾಸಕ್ತಿ ಕಡಿಮೆಯಾಗಿದೆ. ಈ ನಿಟ್ಟಿನಲ್ಲಿ ಶಿಕ್ಷಕರು ಮತ್ತು ಪಾಲಕರು ಗಮನ ಹರಿಸಿ ಮಕ್ಕಳಲ್ಲಿ ಕಲಿಕೆಯ ಆಸಕ್ತಿ ಹೆಚ್ಚಿಸುವ ಕೆಲಸ ಮಾಡಬೇಕು ಎಂದು ಹೇಳಿದರು

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಶ್ರೀಶೈಲ ಬಿರಾದಾರ ಅವರು ಮಾತನಾಡಿ, ಯಲಬುರ್ಗಾ ಕ್ಷೇತ್ರದಲ್ಲಿ ಪ್ರತಿ ಮೂರು ಕಿಮೀ ಒಂದು ಪ್ರೌಢಶಾಲೆ ಸಿಗುತ್ತದೆ. ಪ್ರತಿಯೊಂದು ಮಗುವಿಗೆ ಶಾಲಾ ಅವಕಾಶ ಸಿಗಬೇಕೆಂಬ ಮಹದಾಶೆಯಿಂದ ಹಿರೇವಂಕಲಕುಂಟಾ ಗ್ರಾಮದ ಶಾಲೆಯಲ್ಲಿ 600 ಮಕ್ಕಳಿದ್ದು, ಈ ಎಲ್ಲಾ ಮಕ್ಕಳಿಗೆ ಒಂದೇ ಶಾಲೆಯಲ್ಲಿ ಕಲಿಯಲು ಕಷ್ಟವಾಗುತ್ತಿದೆ ಎಂದು ಬಸವರಾಜ ರಾಯರಡ್ಡಿ ಅವರಲ್ಲಿ ಮನವಿ ಮಾಡಿಕೊಂಡಾಗ, ಇದ-ಕ್ಕೆ ತಕ್ಷಣ ಸ್ಪಂದಿಸಿ, ಸರ್ಕಾರಿ ಬಾಲಕಿಯರ ಪ್ರೌಢಶಾಲೆಯನ್ನು ಮಂಜೂರು ಮಾಡಿದ್ದು, ಇಂದು ಸಚಿವರಿಂದ ಉದ್ಘಾಟನೆಗೊಂಡಿದೆ. ಈ ಶಾಲೆಯಲ್ಲಿ ಸದ್ಯ 80 ಮಕ್ಕಳು ದಾಖಲಾಗಿದ್ದು, ಮುಂದಿನ ದಿನಮಾನಗಳಲ್ಲಿ 300 ಮಕ್ಕಳು ದಾಖಲಾಗಲು ಅವಕಾಶವಿದೆ. ಎರಡು ವರ್ಷದ ಅವಧಿಯಲ್ಲಿ ನಮ್ಮ ಜಿಲ್ಲೆಗೆ 18 ಪ್ರೌಢಶಾಲೆಗಳು, 5 ಪಿಯು ಕಾಲೇಜುಗಳು ಮತ್ತು ಮೊರಾರ್ಜಿ ಶಾಲೆಗಳು, ಪದವಿ ಕಾಲೇಜುಗಳು ಬಂದಿವೆ. ಇದಲ್ಲದೆ ಪ್ರಸ್ತುತ ವಿಶ್ವದಲ್ಲಿ ಬೇಡಿಕೆಯಲ್ಲಿರುವ ಕೌಶಲ್ಯ ಅಭಿವೃದ್ಧಿಯ ತರಬೇತಿಯನ್ನು ಈ ಭಾಗದ ಮಕ್ಕಳು ಕಲಿಯಬೇಕೆಂಬ ಉದ್ದೇಶದಿಂದ ಕೌಶಲ್ಯ ತರಬೇತಿ ಕೇಂದ್ರಕ್ಕೆ ರೂ. 120 ಕೋಟಿಗಳ ಅನುದಾನವನ್ನು ಒದಗಿಸಿದ್ದಾರೆ. ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಯಲಬುರ್ಗಾ ತಾಲ್ಲೂಕು ಮೊದಲ ಸ್ಥಾನದಲ್ಲಿದ್ದು, ಶಿಕ್ಷಣ-ಕ್ಕಾಗಿ ಬೇಕಾಗಿರುವ ಎಲ್ಲಾ ಸೌಲಭ್ಯಗಳನ್ನು ರಾಯರಡ್ಡಿ ಯವರು ಒದಗಿಸಿಕೊಟ್ಟಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಹಿರೇವಂಕಲಕುಂಟಾ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಹುಲಿಗೆಮ್ಮ ಬಸವರಾಜ ತಳವಾರ, ಕೊಪ್ಪಳ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಮಾಜಿ ಜಿ.ಪಂ ಸದಸ್ಯರಾದ ಹನುಮಂತಗೌಡ ಚಂಡೂರು, ಮಹೇಶ ಹಳ್ಳಿ, ಅಶೋಕ ತೋಟದ, ಶಾಲೆಯ ಮುಖ್ಯೋಪಾಧ್ಯಾಯರಾದ ಬಾಬುಸಾಬ ಲೈನ್ದಾರ್ ಹಾಗೂ ಎಸ್.ಡಿ.ಎಂ.ಸಿ ಅಧ್ಯಕ್ಷರು, ಸದಸ್ಯರು, ಶಾಲೆಯ ಶಿಕ್ಷಕರು, ಜನಪ್ರತಿನಿಧಿಗಳು, ಶಾಲೆಯ ಮಕ್ಕಳು ಸೇರಿದಂತೆ ಹಿರೇವಂಕಲಕುಂಟಾ ಗ್ರಾಮಸ್ಥರು ಉಪಸ್ಥಿತರಿದ್ದರು.

ವಿವಿಧ ಕಾರ್ಯಕ್ರಮಗಳಿಗೆ ಸಚಿವರಿಂದ ಚಾಲನೆ: ಯಲಬುರ್ಗಾ ತಾಲ್ಲೂಕಿನ ಹುಲೇಗುಡ್ಡ ಗ್ರಾಮ ಮತ್ತು ದ್ಯಾಂಪುರ ಗ್ರಾಮದಲ್ಲಿ ನೂತನ ಸರ್ಕಾರಿ ಪ್ರೌಢಶಾಲೆಗಳನ್ನು ಸಚಿವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರಡ್ಡಿ, ಶಿಕ್ಷಣ ಇಲಾಖೆ ಅಧಿಕಾರಿಗಳು, ಜನಪ್ರತಿನಿಧಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.



ಮಾತುಕತೆಯ ಬಗ್ಗೆ ಸಾರ್ವಜನಿಕವಾಗಿ ಮಾತನಾಡಲು ಅಧಿಕಾರ ಇಲ್ಲದಿರುವುದರಿಂದ ಹೆಸರನ್ನು ಗೋಪ್ಯವಾಗಿಡಬೇಕು ಎನ್ನುವ ಷರತ್ತಿನೊಂದಿಗೆ ಅವರು ಈ ಮಾಹಿತಿಯನ್ನು ನ್ಯೂಯಾರ್ಕ್ ಟೈಮ್‌ನೊಂದಿಗೆ ಹಂಚಿಕೊಂಡಿದ್ದಾರೆ. ಪೂರ್ವ ವಲಯ ಸಮಯ ಸಮಾರು ಸಂಜೆ 6 ಗಂಟೆಗೆ (ಭಾರತದಲ್ಲಿ ಮುಂಜಾನೆ 3.30) ಕದನ ವಿರಾಮದ ಬಗ್ಗೆ ಟ್ರಂಪ್ ಘೋಷಣೆ ಮಾಡಿದ್ದರು. ಅದು ಅವರ ಆಡಳಿತದ ಹಿರಿಯ ಅಧಿಕಾರಿಗಳಿಗೂ ಅಚ್ಚರಿಯನ್ನುಂಟು ಮಾಡಿದೆ. ಕದನ ವಿರಾಮದ ಬಗ್ಗೆ ಇಸ್ರೇಲ್‌ನಿಂದ ಇನ್ನೂ ಅಧಿಕೃತ ಹೇಳಿಕೆ ಬಂದಿಲ್ಲ. ಆದರೆ, ಟ್ರಂಪ್ ಘೋಷಣೆ ಮಾಡಿದ ಮೂರು ಗಂಟೆಯೊಳಗೆ ಇರಾನ್ ಮೇಲೆ ಇಸ್ರೇಲ್ ದಾಳಿ ನಡೆಸಿದೆ. ಇದರಿಂದ ಕದನ ವಿರಾಮಕ್ಕೆ ಉಭಯ ರಾಷ್ಟ್ರಗಳು ಒಪ್ಪಿವೆಯೇ ಎನ್ನುವ ಪ್ರಶ್ನೆ ಎದುರಾಗಿದೆ. ಇರಾನ್‌ನ ಪರಮಾಣು ಕಾರ್ಯಕ್ರಮವನ್ನು ಮೊಟಕುಗೊಳಿಸುವ ಒಪ್ಪಂದಕ್ಕಾಗಿ ಕಳೆದ ಎರಡು ತಿಂಗಳುಗಳಿಂದ ಪ್ರಯತ್ನ ಮಾಡುತ್ತಿದ್ದ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್, ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಮತ್ತು ಟ್ರಂಪ್‌ರ ವಿಶೇಷ ರಾಯಭಾರಿ ಸ್ಟೀವ್ ವಿಟ್‌ಕಾಫ್ ಅವರು ಕದನ ವಿರಾಮಕ್ಕೆ ಟ್ರಂಪ್ ಮೇಲೆ ಒತ್ತಡ ಹೇರಿದರು ಎಂದು ಅವರು ಮಾಹಿತಿ ನೀಡಿದ್ದಾರೆ. ಇರಾನ್ ಅನ್ನು ಸಂಪರ್ಕಿಸಲು ಈ ಮೂವರು ನೇರ ಹಾಗೂ ಪರೋಕ್ಷ ಮಾರ್ಗಗಳನ್ನು ಬಳಸಿದರು. ಇರಾನ್‌ನಿಂದ ಯಾವುದೇ ದಾಳಿ ನಡೆಯುವುದಿಲ್ಲ ಎಂದಾದರೆ ಮಾತ್ರ ಕದನ ವಿರಾಮ ಎನ್ನುವ ಷರತ್ತಿನೊಂದಿಗೆ ಇಸ್ರೇಲ್ ಕದನ ವಿರಾಮಕ್ಕೆ ಒಪ್ಪಿಕೊಂಡಿತು ಎಂದು ಅವರು ಹೇಳಿದ್ದಾರೆ. ಕದನ ವಿರಾಮ ಮಾತುಕತೆಗೆ ಒಪ್ಪಬೇಕು ಎಂದು ಇಸ್ರೇಲ್‌ಗೆ ಷರತ್ತು ವಿಧಿಸಿ ಅಮೆರಿಕ ಇಸ್ರೇಲ್‌ನ ಪರಮಾಣು ಘಟಕಗಳ ಮೇಲೆ ದಾಳಿ ನಡೆಸಿತ್ತು ಎಂದೂ ಅವರು ಹೇಳಿದ್ದಾರೆ. ಆದರೆ, ಯಾವ ಷರತ್ತಿನೊಂದಿಗೆ ಇರಾನ್ ಕದನ ವಿರಾಮಕ್ಕೆ ಒಪ್ಪಿಕೊಂಡಿತು ಎನ್ನುವುದರ ಬಗ್ಗೆ ಮಾಹಿತಿ ನೀಡಲು ಅಧಿಕಾರಿ ನಿರಾಕರಿಸಿದರು. ಸಂಘರ್ಷ ಪೀಡಿತ ಇರಾನ್‌ನಿಂದ 292 ಭಾರತೀಯರನ್ನು ಸುರಕ್ಷಿತವಾಗಿ ಮಂಗಳವಾರ ತಾಯ್ನಾಡಿಗೆ ಕರೆತರಲಾಯಿತು ಎಂದು ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಇಂದು ಮುಂಜಾನೆ 3:30ಕ್ಕೆ ಮಶಾದ್‌ನಿಂದ ನವದೆಹಲಿಗೆ ವಿಶೇಷ ವಿಮಾನದಲ್ಲಿ ಭಾರತೀಯರು ತಾಯ್ನಾಡಿಗೆ ವಾಪಸ್ ಆಗಿದ್ದಾರೆ ಎಂದು ವಿಶೇಶಾಂಗ ಸಚಿವಾಲಯದ ವಕ್ತಾರ ರಣಧೀರಗ್ ಜೈಸ್ವಾಲ್ ತಿಳಿಸಿದ್ದಾರೆ. ಇರಾನ್ ಮತ್ತು ಇಸ್ರೇಲ್ ನಡುವಿನ ಸಂಘರ್ಷದ ಬೆನ್ನಲೇ ಆಪರೇಷನ್ ಸಿಂಧು ಕಾರ್ಯಾಚರಣೆಯ ಮೂಲಕ ಇರಾನ್‌ನಿಂದ ಇದುವರೆಗೂ 2,295 ಮಂದಿ ಭಾರತಕ್ಕೆ ಮರಳಿದ್ದಾರೆ. ಅಮೆರಿಕ ಇರಾನಿನ ಮೂರು ಪರಮಾಣು ತಾಣಗಳ ಮೇಲೆ ಬಾಂಬ್ ದಾಳಿ ನಡೆಸಿದ ಬಳಿಕ ಉದ್ವಿಗ್ನತೆ ಪರಿಸ್ಥಿತಿ ಹೆಚ್ಚಾಯಿತು. ಇರಾನ್ ಮತ್ತು ಇಸ್ರೇಲ್ ನಡುವಿನ ಉದ್ವಿಗ್ನ ಪರಿಸ್ಥಿತಿ ಹಿನ್ನೆಲೆಯಲ್ಲಿ, ಭಾರತೀಯರನ್ನು ತಾಯ್ನಾಡಿಗೆ ಕರೆ ತರುವ ಪ್ರಯತ್ನದ ಭಾಗವಾಗಿ ಭಾರತ ಕಳೆದ ವಾರ ಆಪರೇಷನ್ ಸಿಂಧೂ ಎಂಬ ಕಾರ್ಯಾಚರಣೆಯನ್ನು ಆರಂಭಿಸಿತು. ಪಶ್ಚಿಮ ಏಷ್ಯಾ ಮತ್ತು ಯುರೋಪ್‌ನಲ್ಲಿ ನಡೆಯುತ್ತಿರುವ ಸಂಘರ್ಷಗಳ ಕುರಿತು ಕಳವಳ ವ್ಯಕ್ತಪಡಿಸಿದ್ದು, ಇದು ಯುದ್ಧದ ಯುಗವಲ್ಲ. ಮಾತುಕತೆ ಮೂಲಕ ಪರಿಹಾರ ಕಂಡುಕೊಳ್ಳುವುದು ಮತ್ತು ಶಾಂತಿ ಸ್ಥಿರತೆ ಪುನ:ಸ್ಥಾಪನೆಗೆ ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿ ಒತ್ತಾಯಿಸಿದ್ದರು.

# ಇಸ್ರೇಲ್–ಇರಾನ್ ಕದನಕ್ಕೆ 'ತಾಂತ್ರಿಕ' ವಿರಾಮ..!



ಪ್ರಚಲಿತ ವಿದ್ಯಮಾನ
ಚಂದ್ರಕಾಂತ ಬಾರಕೇರ
chandru.baraker@gmail.com

ಇರಾನ್ ಮೇಲೆ ನಡೆದಿರುವ ದಾಳಿಯನ್ನು ಕೆಲವು ದೇಶಗಳು ಖಂಡಿಸಿರುವುದನ್ನು ಹೊರತುಪಡಿಸಿದರೆ, ಆ ದೇಶಕ್ಕೆ ಬೇರೆ ಯಾವುದೇ ಬಗೆಯ ಬೆಂಬಲ ಸಿಕ್ಕಿಲ್ಲ. ಆದ–ರೆ, ಇರಾನ್ ಮಿಲಿಟರಿಯ ಇಸ್ರೇಲ್ ಮೇಲೆ ಪ್ರತಿದಾಳಿ ನಡೆಸುತ್ತಿದೆ. ಅಮೆರಿಕದ ನೆಲೆಗಳ ಮೇಲೆ ದಾಳಿ ನಡೆಸುವುದಾಗಿ ಇರಾನ್ ಹೇಳಿದೆ ಎಂದು ವರದಿಯಾಗಿದೆ.

ಇಸ್ರೇಲ್ ನಡೆಸುತ್ತಿರುವ ನಿರಂತರ ದಾಳಿಗಳು ಇರಾನ್‌ನ ಪ್ರಾದೇಶಿಕ ಪಾಲುದಾರರಾದ ಹಿಜ್ಬುಲ್ಲಾದಂತಹ ಸಂಘಟನೆಗಳನ್ನು ದುರ್ಬಲಗೊಳಿಸಿವೆ. ಹೊರ್ಮುಜ್ ಜಲಸಂಧಿಯನ್ನು ಮುಚ್ಚಲಾಗುವುದು ಎಂದು ಇರಾನ್ ಹೇಳಿದೆ. ಅದನ್ನು ಕಾರ್ಯರೂಪಕ್ಕೆ ತಂದ–ರೆ, ಕಚ್ಚಾ ತೈಲ ಹಾಗೂ ನೈಸಗಿರ್ಕ ಅನಿಲ ಪೊ–ರೈಕೆಗೆ ಅಡ್ಡಿ ಸೃಷ್ಟಿಸಿದರೆ ಇರಾನ್ ದೇಶದ ಅರ್ಥ ವ್ಯವಸ್ಥೆಗೆ ದೊಡ್ಡ ಮಟ್ಟದಲ್ಲಿ ಪೆಟ್ಟು ಬೀಳಲಿದೆ. ತನ್ನ ಮೇಲೆನ ದಾಳಿಗಳಿಗೆ ಪ್ರತಿದಾಳಿ ನಡೆಸುವ ಬಗ್ಗೆ ಇರಾನ್ ಆಲೋಚನೆ ನಡೆಸಿರುವ ಹೊತ್ತಿನಲ್ಲಿ ಇಸ್ರೇಲ್ ದೇಶವು ಹೊಸ ಸಂಕಥನವೊಂದನ್ನು ಹುಟ್ಟುಹಾಕುತ್ತಿದೆ. ಇರಾನ್‌ನ ಆಡಳಿತದ ಚುಕ್ಕಾಣಿ ಹಿಡಿದವರು ಬದಲಾಗಬೇಕು ಎಂದು ಅದು ಹೇಳುತ್ತಿದೆ. ಇಸ್ರೇಲ್ ದೇಶವು ಬೆಂಜಮಿನ್ ನೆತನ್ಯಾಹು ನಾಯಕತ್ವದಲ್ಲಿ ನಡೆಸುತ್ತಿರುವ ಅಪಾಯಕಾರಿ ದಾಳಿಗಳಿಗೆ ಅಮೆರಿಕದ ಅಧ್ಯಕ್ಷ ಡೊನಾಲ್ಡ್‌ಟ್ರಂಪ್ ಅವರ ಬೆಂಬಲ ಇದೆ. ಈ ಹಿಂದೆ ಆಗಿರುವಂತೆಯೇ, ಪಶ್ಚಿಮ ಏಷ್ಯಾ ಪ್ರದೇಶವು ದೀರ್ಘಾವಧಿಗೆ ಅಶಾಂತಿಗೆ ಸಿಲುಕುವ ಅಪಾಯ ಎದುರಾಗಿದೆ. ಇರಾಕ್ ದೇಶವು ಸಮೂಹನಾಶಕ ಶಸ್ತ್ರಾಸ್ತ್ರಗಳನ್ನು ಅಭಿವೃದ್ಧಿಪಡಿಸುತ್ತಿದೆ ಎಂದು ಅಮೆರಿಕವು ಆ ದೇಶದ ಮೇಲೆ ದಾಳಿ ನಡೆಸಿತ್ತು. ಸಂಘರ್ಷಕ್ಕೆ ಸಿಲುಕಿದ ಕೆಲವು ದೇಶಗಳಲ್ಲಿ ಪ್ರಜಾತಂತ್ರ ಮರುಸ್ಥಾಪಿಸುವುದಾಗಿ ಹೇಳಿಕೊಂಡು ಅಮೆರಿಕವು ಅಲ್ಲಿ ಬಂಡುಕೋರರ ಜೊತೆ ಕೈಜೋಡಿಸಿದ ನಿದರ್ಶನ ಕೂಡ ಇದೆ.

ಇರಾನ್ ಪರಮಾಣು ಘಟಕಗಳನ್ನು ಪೂರ್ತಿಯಾಗಿ ನಾಶಪಡಿಸಲಾಗಿದೆ ಎಂದು ಟ್ರಂಪ್ ಅವರು ಪುನರುಚ್ಚರಿಸಿದ್ದಾರೆ. ಮುಂದೆಯೂ ವೈಮಾನಿಕ ದಾಳಿ ನಡೆಸಲಾಗುತ್ತದೆ ಎಂದು ಎಚ್ಚರಿಸಿದ್ದಾರೆ. ಆದರೆ, ಇರಾನ್ ದೇಶಕ್ಕೆ ಅಣ್ವಸ್ತ್ರಗಳನ್ನು ಹೊಂದುವ ಮಹತ್ವಾಕಾಂಕ್ಷೆ ಇದೆ ಎನ್ನಲು ಗಟ್ಟಿಯಾದ ಸಾಕ್ಷ್ಯಗಳು ಇಲ್ಲದಿರುವಾಗ ಈ ಬಗೆಯಲ್ಲಿ ಅಕ್ರಮಣ ನಡೆಸುವುದು ಅಂತರಾಷ್ಟ್ರೀಯ ಕಾನೂನುಗಳಿಗೆ ಅನುಗುಣವಾದ ನಡೆ ಅಲ್ಲ. ವಿಶ್ವಸಂಸ್ಥೆಯ ಸನ್ನದಿನ 51ನೇ ವಿಧಿಯ ಪ್ರಕಾರ, ಸಶಸ್ತ್ರ ದಾಳಿ ನಡೆದಲ್ಲಿ ಅದಕ್ಕೆ ಪ್ರತಿಯಾಗಿ ರಕ್ಷಣೆ–ಯ ಉದ್ದೇಶದಿಂದ ದಾಳಿ ನಡೆಸುವ ಹಕ್ಕು ಇರುತ್ತದೆ. ಆದರೆ, ಇರಾನ್ ಮೇಲಿನ ದಾಳಿಯನ್ನು ಮುಂದೆ ಆಗಬಹುದಾದ ದಾಳಿಯನ್ನು ತಡೆಯುವ ಉದ್ದೇಶದಿಂದ ನಡೆಸಲಾಗಿದೆ. ಅಂತರಾಷ್ಟ್ರೀಯ ಅಣುಶಕ್ತಿ ಸಂಸ್ಥೆಯ (ಐಎಇಎ) ಮಹಾನಿರ್ದೇಶಕ ರಫೇಲ್ ಗ್ರಾಸ್ಸಿ ಅವರು ಈಚೆಗೆ ನೀಡಿರುವ ಹೇಳಿಕೆ ಪ್ರಕಾರ, ಇರಾನ್‌ನಲ್ಲಿ ಯುರೇನಿಯಂ ಶಕ್ತಿವರ್ಧನೆಯು ಕಳವಳಕಾರಿ ಹೌದಾದರೂ ಅಲ್ಲಿ ಅಣ್ವಸ್ತ್ರ ಸಾಧನವೊಂದನ್ನು ಅಭಿವೃದ್ಧಿಪಡಿಸುವ ವ್ಯವಸ್ಥಿತ ಯೋಜನೆ ನಡೆದಿದೆ ಎನ್ನುವುದಕ್ಕೆ ಸಾಕ್ಷ್ಯಗಳಿಲ್ಲ. ಮಿಲಿಟರಿ ಬಲಪ್ರಯೋಗದ ಮೂಲಕ ಪರಿಸ್ಥಿತಿಯು ಬಿಗಡಾಯಿಸುವಂತೆ ಮಾಡುವ ಕ್ರಮಗಳ ವಿರುದ್ಧ ಎಚ್ಚರಿಕೆ ನೀಡಿರುವ ಈ ಸಂಸ್ಥೆಯು ಇಂತಹ ಪ್ರಯತ್ನಗಳು ಸಮಸ್ಯೆಗೆ ರಾಜ–ತಾಂತ್ರಿಕ ಪರಿಹಾರ ಕಂಡುಕೊಳ್ಳುವ ಕೆಲಸಗಳಿಗೆ ಅಡ್ಡಿಯಾಗಬಹುದು ಎಂದು ಹೇಳಿದೆ. ಆದರೆ, ನೆತನ್ಯಾಹು ಮತ್ತು ಟ್ರಂಪ್ ಅವರ ಹೇಳಿಕೆಗಳನ್ನು ಗಮನಿಸಿದರೆ, ಸಂಯಮಕ್ಕಿಂತ ಆರ್ಭಟವೇ ಹೆಚ್ಚು ಬಲ ಪಡೆದಿರುವಂತೆ ಕಾಣುತ್ತಿದೆ.

ಇರಾನ್‌ನ ಪರಮಾಣು ಘಟಕಗಳ




ಮೇಲೆ ದಾಳಿ ನಡೆಸುವ ಮೂಲಕ ಇಸ್ರೇಲ್–ಇರಾನ್ ಯುದ್ಧರಂಗವನ್ನು ಅಮೆರಿಕ ಕೂಡ ಪ್ರವೇಶಿಸಿದೆ. ಈ ದಾಳಿಯ ಮೂಲಕ ಅಮೆರಿಕವು ಜಾಗತಿಕ ಮಟ್ಟದಲ್ಲಿ ಪರಿಣಾಮವನ್ನುಂಟು ಮಾಡುವ ಪ್ರಾದೇಶಿಕ ಅಸ್ಥಿರತೆಗೆ ಪಶ್ಚಿಮ ಏಷ್ಯಾವನ್ನು ನೂಕಿದೆ. ಇರಾನ್ ಮೇಲಿನ ದಾಳಿಗೆ ಅಮೆರಿಕವು ಆಪರೇಷನ್ ಮಿಡ್‌ನೈಟ್ ಹ್ಯಾಮರ್ ಎಂಬ ಹೆಸರು ಇತ್ತಿದೆ. ಈ ಕಾರ್ಯಾಚರಣೆಯ ಭಾಗವಾಗಿ ಅಮೆರಿಕವು ಇರಾನ್‌ನ ಪೋರ್ಡೋ ಮತ್ತು ನಟಾನ್ಜ ಪರಮಾನು ಘಟಕಗಳ ಮೇಲೆ ತನ್ನ ಬಿ–2 ಯುದ್ಧವಿಮಾನ ಬಳಸಿ ಬಾಂಬ್ ದಾಳಿ ನಡೆಸಿದೆ. ಇರಾನ್‌ನ ಎಸ್‌ಫಹಾನ್ ಪರಮಾಣು ಘಟಕಗಳ ಮೇಲೆ ತನ್ನ ಬಿ–2 ಯುದ್ಧವಿಮಾನ ಬಳಸಿ ಬಾಂಬ್ ದಾಳಿ ನಡೆಸಿದೆ. ಇರಾನ್‌ನ ಎಸ್‌ಫಹಾನ್ ಪರಮಾಣು ಕೇಂದ್ರದ ಮೇಲೆ ಅಮೆರಿಕವು ಜಲಾಂತರ್ಗಾಮಿಯೊಂದರಿಂದ ಟಾಮಹಾಕ್ ಕ್ಷಿಪಣಿ ಬಳಸಿ ದಾಳಿ ಮಾಡಿದೆ. ಈ ದಾಳಿಗಳು ಇರಾನ್ ಮೂರು ಘಟಕಗಳ ಮೇಲೆ ತೀವ್ರ ಪ್ರಮಾಣದ ಹಾನಿಯನ್ನು ಉಂಟುಮಾಡಿವೆ ಎಂದು ಅಮೆರಿಕದ ಹಿರಿಯ ಮಿಲಿಟರಿ ಅಧಿಕಾರಿಗಳು ಹೇಳಿದ್ದಾರೆ. ಇರಾನ್ ದೇಶವು ಅಣು ಬಾಂಬ್ ಸಿದ್ಧಪಡಿಸಲು ಬೇಕಿರುವ ಯುರೇನಿಯಂ ಸಂಗ್ರಹಿಸಿ ಇಟ್ಟುಕೊಂಡಿದೆ ಎಂಬ ವರದಿಗಳನ್ನು ಉಲ್ಲೇಖಿಸಿ ಅಮೆರಿಕ ಮತ್ತು ಇಸ್ರೇಲ್ ಈ ದಾಳಿಯನ್ನು ಮುನ್ನೇಚ್ಚರಿಕೆಯ ಕ್ರಮ ಎಂದು ಬಣ್ಣಿಸಿವೆ. ಆದರೆ, ಅಮೆರಿಕದ ರಾಷ್ಟ್ರೀಯ ಗುಪ್ತಚರ ವಿಭಾಗದ ನಿರ್ದೇಶಕಿ ತುಳಸಿ ಗಬಾರ್ಡ್ ಅವರು, ಇರಾನ್ ದೇಶವು ಅಣ್ವಸ್ತ್ರ ಯೋಜನೆಯಲ್ಲಿ ತೊಡಗಿಲ್ಲ ಎಂದು ಹೇಳಿದ ಮೂರು ತಿಂಗಳ ನಂತರ ಅಮೆರಿಕವು ಈ ದಾಳಿ ನಡೆಸಿದೆ ಎಂಬುದು ಗಮನಾರ್ಹ.



ಕದನ ವಿರಾಮ ಜಾರಿಯಲ್ಲಿದೆ, ದಯಮಾಡಿ ಉಲ್ಲಂಘಿಸಬೇಡಿ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ ಟ್ರಂಪ ತಮ್ಮ ಟ್ರುಥ್ ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ. ಮಂಗಳವಾರ ಜಿಎಂಟಿ–04 ಗಂಟೆಗೆ ಆರಂಭವಾದ 24 ಗಂಟೆಗಳ ಹಂತ ಹಂತದ ಕದನ ವಿರಾಮ ಪ್ರಕ್ರಿಯೆ ನಡೆಯಲಿದೆ. ಇರಾನ್ ಎಲ್ಲಾ ಕಾರ್ಯಾಚರಣೆಗಳನ್ನು ಮೊದಲು ಸ್ಥಗಿತಗೊಳಿಸಲಿದೆ. 12 ಗಂಟೆಗಳ ನಂತರ ಇಸ್ರೇಲ್ ಕೂಡ ಇದೇ ಕ್ರಮ ಕೈಗೊಳ್ಳಲಿದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದರು. ಈ ಘೋಷಣೆ ಬಳಿಕವೂ ಇಸ್ರೇಲ್ ಮೇಲೆ ಇರಾನ್ ಕ್ಷಿಪಣಿ ದಾಳಿ ನಡೆಸಿದೆ. ಈ ದಾಳಿಯಲ್ಲಿ ನಾಲ್ಕು ಮಂದಿ ಸಾವಿಗೀಡಾಗಿದ್ದಾರೆ ಎಂದು ಇಸ್ರೇಲ್ ಖಚಿಪಡಿಸಿದೆ. ಇರಾನ್ ದಾಳಿಯಿಂದ ನಾಲ್ವರು ಸಾವಿಗೀಡಾಗಿದ್ದು, 20 ಮಂದಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಕ್ಷಿಪಣಿ ದಾಳಿಯಿಂದಾಗಿ ಕಟ್ಟಡಕ್ಕೆ ಅಪಾರ ಹಾನಿಯನ್ನುಂಟಾಗಿದೆ ಎಂದು ಇಸ್ರೇಲಿ ತುರ್ತು ಸೇವೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ. ಈ ದಾಳಿ ಬಳಿಕ ಕದನ ವಿರಾಮ ಜಾರಿಯಲ್ಲಿದೆ ಎಂದು ಟ್ರಂಪ್ ಬರೆದುಕೊಂಡಿದ್ದಾರೆ. ಇದಕ್ಕೂ ಮುನ್ನ, ಇಸ್ರೇಲ್‌ನ ಆಕ್ರಮಣಕ್ಕೆ ಪ್ರತಿಯಾಗಿ ನಮ್ಮ ಪ್ರಬಲ ಸಶಸ್ತ್ರ ಪಡೆಗಳ ಕಾರ್ಯಾಚರಣೆಗಳು ಬೆಳಿಗ್ಗೆ 4 ಗಂಟೆಯ ಕೊನೆಯ ನಿಮಿಷದವರೆಗೆ ಮುಂದುವರೆದವು ಎಂದು ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಾಗ್ಚಿ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದರು.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರಸ್ತಾಪಿಸಿದ ಕದನ ವಿರಾಮವನ್ನು ಇಸೇಲ್ ಮತ್ತು ಇರಾನ್ ಮಂಗಳವಾರ ಒಪ್ಪಿಕೊಂಡಿವೆ. ಈ ಮೂಲಕ ಮಧ್ಯಪ್ರಾಚ್ಯವನ್ನು ಬೆಚ್ಚಿಬೀಳಿಸಿದ 12 ದಿನಗಳ ಯುದ್ಧ ತಾಂತ್ರಿಕವಾಗಿ ಕೊನೆಗೊಂಡಿದೆ. ಪರಮಾಣು ಕೇಂದ್ರಗಳ ಮೇಲೆ ದಾಳಿಗೆ ಪ್ರತೀಕಾರವಾಗಿ, ಕತಾರ್‌ನಲ್ಲಿರುವ ಅಮೆರಿಕದ ಸೇನಾ ನೆಲೆಗಳ ಮೇಲೆ ಸೋಮವಾರ ಇರಾನ್ ಕ್ಷಿಪಣಿ ದಾಳಿ ನಡೆಸಿತ್ತು. ಇದರ ಬೆನ್ನಲೇ ಉಭಯ ರಾಷ್ಟ್ರಗಳ ನಡುವೆ ಕದನ ವಿರಾಮ ಏರ್ಪಟ್ಟಿದೆ ಎಂದು ಟ್ರಂಪ್ ಘೋಷಿಸಿದ್ದರು. ಇದರ ಬಳಿಕ ಇಸ್ರೇಲ್ ಅನ್ನು ಗುರಿಯಾಗಿಸಿಕೊಂಡು ಇರಾನ್ ನಡೆಸಿದ ಕೊನೆಯ ಕ್ಷಿಪಣಿ ದಾಳಿಯಲ್ಲಿ 4 ಮಂದಿ ಸಾವಿಗೀಡಾಗಿದ್ದರು. ಇಸ್ರೇಲ್ ಕೂಡ ಬೆಳಗಿನ ಜಾವ ಇರಾನ್ ಮೇಲೆ ದಾಳಿ ನಡೆಸಿತು. ಈ ಬಳಿಕ ಎರಡೂ ರಾಷ್ಟ್ರಗಳು ಕದನ ವಿರಾಮವನ್ನು ಒಪ್ಪಿಕೊಂಡವು. ಟ್ರಂಪ್ ಅವರ ಸಮನ್ವಯದೊಂದಿಗೆ ಇಸ್ರೇಲ್ ಇರಾನ್‌ನೊಂದಿಗೆ ದ್ವಿಪಕ್ಷೀಯ ಕದನ ವಿರಾಮನಕ್ಕೆ ಒಪ್ಪಿಕೊಂಡಿದೆ ಎಂದು ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ. ಪರಮಾಣು ಮತ್ತು ಗುರಿನಿರ್ದೇಶಿತ ಕ್ಷಿಪಣಿ ದಾಳಿ ಬೆದರಿಕೆಯನ್ನು ತೆಗೆದುಹಾಕುವುದು ಸೇರಿದಂತೆ ಇರಾನ್ ವಿರುದ್ಧದ 12 ದಿನಗಳ ಕಾರ್ಯಾಚರಣೆಯಲ್ಲಿ ಇಸ್ರೇಲ್ ತನ್ನ ಎಲ್ಲಾ ಯುದ್ಧ ಗುರಿಗಳನ್ನು ಸಾಧಿಸಿದೆ ಎಂದು ಸೋಮವಾರ ರಾತ್ರಿ ಇಸ್ರೇಲ್‌ನ ಭದ್ರತಾ ಸಂಪುಟಕ್ಕೆ ವರದಿ ಮಾಡಿರುವುದಾಗಿ ನೆತನ್ಯಾಹು ಹೇಳಿದ್ದಾರೆ. ಇರಾನ್‌ನ ಮಿಲಿಟರಿ ನಾಯಕತ್ವ ಮತ್ತು ಹಲವಾರು ಸರಕಾರಿ ತಾಣಗಳನ್ನು ಇರಾನ್ ಹಾನಿಗೊಳಿಸಿದೆ. ಟೆಹರಾನ್‌ನ ವಾಯುಪ್ರದೇಶದ ಮೇಲೆ ನಿಯಂತ್ರಣ ಸಾಧಿಸಿದೆ ಎಂದು ನೆತನ್ಯಾಹು ಹೇಳಿದ್ದಾರೆ. ಕದನ ವಿರಾಮದ ಯಾವುದೇ ಉಲ್ಲಂಘನೆಗೆ ಇಸ್ರೇಲ್ ಬಲವಾಗಿ ಪ್ರತಿಕ್ರಿಯಿಸಿದೆ ಎಂದು ನೆತನ್ಯಾಹು ಹೇಳಿದ್ದಾರೆ.

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆಹನ್ಯಾಹು ಹಾಗೂ ಇರಾನ್ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದ ಕೂಡಲೇ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಉಭಯ ದೇಶಗಳ ನಡುವೆ ಕದನ ವಿರಾಮ ಘೋಷಣೆ ಮಾಡಿದ್ದರು. ಕತಾರ್ ಮಧ್ಯಸ್ಥಿಕೆ ವಹಿಸಿತ್ತು ಎಂದು ಶ್ವೇತಭವನದ ಹಿರಿಯ ಅಧಿಕಾರಿಯೊಬ್ಬರು ಸೋಮವಾರ ತಿಳಿಸಿದ್ದಾರೆ. ಕತಾರ್‌ನ ಅಮೀರ್ ಶೇಖ ತಮೀಮ್ ಬಿಬ್ ಹಮದ್ ಅಲ್ ಥಾನಿ ಅವರು ವಿಮಾರ ಮಾತುಕತೆಯಲ್ಲಿ ಪ್ರಮುಖ ಪಾತ್ರವಹಿಸಿದ್ದರು ಎಂದು ಆ ಅಧಿಕಾರಿ ತಿಳಿಸಿದ್ದಾರೆ.

ಮಾತುಕತೆಯ ಬಗ್ಗೆ ಸಾರ್ವಜನಿಕವಾಗಿ ಮಾತನಾಡಲು ಅಧಿಕಾರ ಇಲ್ಲದಿರುವುದರಿಂದ ಹೆಸರನ್ನು ಗೋಪ್ಯವಾಗಿಡಬೇಕು ಎನ್ನುವ ಷರತ್ತಿನೊಂದಿಗೆ ಅವರು ಈ ಮಾಹಿತಿಯನ್ನು ನ್ಯೂಯಾರ್ಕ್ ಟೈಮ್‌ನೊಂದಿಗೆ ಹಂಚಿಕೊಂಡಿದ್ದಾರೆ. ಪೂರ್ವ ವಲಯ ಸಮಯ ಸಮಾರು ಸಂಜೆ 6 ಗಂಟೆಗೆ (ಭಾರತದಲ್ಲಿ ಮುಂಜಾನೆ 3.30) ಕದನ ವಿರಾಮದ ಬಗ್ಗೆ ಟ್ರಂಪ್ ಘೋಷಣೆ ಮಾಡಿದ್ದರು. ಅದು ಅವರ ಆಡಳಿತದ ಹಿರಿಯ ಅಧಿಕಾರಿಗಳಿಗೂ ಅಚ್ಚರಿಯನ್ನುಂಟು ಮಾಡಿದೆ. ಕದನ ವಿರಾಮದ ಬಗ್ಗೆ ಇಸ್ರೇಲ್‌ನಿಂದ ಇನ್ನೂ ಅಧಿಕೃತ ಹೇಳಿಕೆ ಬಂದಿಲ್ಲ. ಆದರೆ, ಟ್ರಂಪ್ ಘೋಷಣೆ ಮಾಡಿದ ಮೂರು ಗಂಟೆಯೊಳಗೆ ಇರಾನ್ ಮೇಲೆ ಇಸ್ರೇಲ್ ದಾಳಿ ನಡೆಸಿದೆ. ಇದರಿಂದ ಕದನ ವಿರಾಮಕ್ಕೆ ಉಭಯ ರಾಷ್ಟ್ರಗಳು ಒಪ್ಪಿವೆಯೇ ಎನ್ನುವ ಪ್ರಶ್ನೆ ಎದುರಾಗಿದೆ. ಇರಾನ್‌ನ ಪರಮಾಣು ಕಾರ್ಯಕ್ರಮವನ್ನು ಮೊಟಕುಗೊಳಿಸುವ ಒಪ್ಪಂದಕ್ಕಾಗಿ ಕಳೆದ ಎರಡು ತಿಂಗಳುಗಳಿಂದ ಪ್ರಯತ್ನ ಮಾಡುತ್ತಿದ್ದ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್, ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಮತ್ತು ಟ್ರಂಪ್‌ರ ವಿಶೇಷ ರಾಯಭಾರಿ ಸ್ಟೀವ್ ವಿಟ್‌ಕಾಫ್ ಅವರು ಕದನ ವಿರಾಮಕ್ಕೆ ಟ್ರಂಪ್ ಮೇಲೆ ಒತ್ತಡ ಹೇರಿದರು ಎಂದು ಅವರು ಮಾಹಿತಿ ನೀಡಿದ್ದಾರೆ. ಇರಾನ್ ಅನ್ನು ಸಂಪರ್ಕಿಸಲು ಈ ಮೂವರು ನೇರ ಹಾಗೂ ಪರೋಕ್ಷ ಮಾರ್ಗಗಳನ್ನು ಬಳಸಿದರು. ಇರಾನ್‌ನಿಂದ ಯಾವುದೇ ದಾಳಿ ನಡೆಯುವುದಿಲ್ಲ ಎಂದಾದರೆ ಮಾತ್ರ ಕದನ ವಿರಾಮ ಎನ್ನುವ ಷರತ್ತಿನೊಂದಿಗೆ ಇಸ್ರೇಲ್ ಕದನ ವಿರಾಮಕ್ಕೆ ಒಪ್ಪಿಕೊಂಡಿತು ಎಂದು ಅವರು ಹೇಳಿದ್ದಾರೆ. ಕದನ ವಿರಾಮ ಮಾತುಕತೆಗೆ ಒಪ್ಪಬೇಕು ಎಂದು ಇಸ್ರೇಲ್‌ಗೆ ಷರತ್ತು ವಿಧಿಸಿ ಅಮೆರಿಕ ಇಸ್ರೇಲ್‌ನ ಪರಮಾಣು ಘಟಕಗಳ ಮೇಲೆ ದಾಳಿ ನಡೆಸಿತ್ತು ಎಂದೂ ಅವರು ಹೇಳಿದ್ದಾರೆ. ಆದರೆ, ಯಾವ ಷರತ್ತಿನೊಂದಿಗೆ ಇರಾನ್ ಕದನ ವಿರಾಮಕ್ಕೆ ಒಪ್ಪಿಕೊಂಡಿತು ಎನ್ನುವುದರ ಬಗ್ಗೆ ಮಾಹಿತಿ ನೀಡಲು ಅಧಿಕಾರಿ ನಿರಾಕರಿಸಿದರು.

ಸಂಘರ್ಷ ಪೀಡಿತ ಇರಾನ್‌ನಿಂದ 292 ಭಾರತೀಯರನ್ನು ಸುರಕ್ಷಿತವಾಗಿ ಮಂಗಳವಾರ ತಾಯ್ನಾಡಿಗೆ ಕರೆತರಲಾಯಿತು ಎಂದು ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಇಂದು ಮುಂಜಾನೆ 3:30ಕ್ಕೆ ಮಶಾದ್‌ನಿಂದ ನವದೆಹಲಿಗೆ ವಿಶೇಷ ವಿಮಾನದಲ್ಲಿ ಭಾರತೀಯರು ತಾಯ್ನಾಡಿಗೆ ವಾಪಸ್ ಆಗಿದ್ದಾ–ರೆ ಎಂದು ವಿಶೇಶಾಂಗ ಸಚಿವಾಲಯದ ವಕ್ತಾರ ರಣಧೀರಗ್ ಜೈಸ್ವಾಲ್ ತಿಳಿಸಿದ್ದಾರೆ. ಇರಾನ್ ಮತ್ತು ಇಸ್ರೇಲ್ ನಡುವಿನ ಸಂಘರ್ಷದ ಬೆನ್ನಲೇ ಆಪರೇಷನ್ ಸಿಂಧು ಕಾರ್ಯಾಚರಣೆಯ ಮೂಲಕ ಇರಾನ್‌ನಿಂದ ಇದುವರೆಗೂ 2,295 ಮಂದಿ ಭಾರತಕ್ಕೆ ಮರಳಿದ್ದಾರೆ. ಅಮೆರಿಕ ಇರಾನಿನ ಮೂರು ಪರಮಾಣು ತಾಣಗಳ ಮೇಲೆ ಬಾಂಬ್ ದಾಳಿ ನಡೆಸಿದ ಬಳಿಕ ಉದ್ವಿಗ್ನತೆ ಪರಿಸ್ಥಿತಿ ಹೆಚ್ಚಾಯಿತು. ಇರಾನ್ ಮತ್ತು ಇಸ್ರೇಲ್ ನಡುವಿನ ಉದ್ವಿಗ್ನ ಪರಿಸ್ಥಿತಿ ಹಿನ್ನೆಲೆಯಲ್ಲಿ, ಭಾರತೀಯರನ್ನು ತಾಯ್ನಾಡಿಗೆ ಕರೆ ತರುವ ಪ್ರಯತ್ನದ ಭಾಗವಾಗಿ ಭಾರತ ಕಳೆದ ವಾರ ಆಪರೇಷನ್ ಸಿಂಧೂ ಎಂಬ ಕಾರ್ಯಾಚರಣೆಯನ್ನು ಆರಂಭಿಸಿತ್ತು. ಪಶ್ಚಿಮ ಏಷ್ಯಾ ಮತ್ತು ಯುರೋಪ್‌ನಲ್ಲಿ ನಡೆಯುತ್ತಿರುವ ಸಂಘರ್ಷಗಳ ಕುರಿತು ಕಳವಳ ವ್ಯಕ್ತಪಡಿಸಿದ್ದು, ಇದು ಯುದ್ಧದ ಯುಗವಲ್ಲ. ಮಾತುಕತೆ ಮೂಲಕ ಪರಿಹಾರ ಕಂಡುಕೊಳ್ಳುವುದು ಮತ್ತು ಶಾಂತಿ ಸ್ಥಿರತೆ ಪುನ:ಸ್ಥಾಪನೆಗೆ ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿ ಒತ್ತಾಯಿಸಿದ್ದರು.

## ಎಸ್.ಎಸ್.ಎಲ್.ಸಿ ಪರೀಕ್ಷೆ–3 : ನಿಷೇಧಾಜ್ಞೆ ಜಾರಿ

**ಕೊಪ್ಪಳ:** ಎಸ್.ಎಸ್.ಎಲ್.ಸಿ ಪರೀಕ್ಷೆ–3 ರ ಪರೀಕ್ಷೆಗಳು ಜುಲೈ 05 ರಿಂದ ಜುಲೈ 12 ರವರೆಗೆ ಕೊಪ್ಪಳ ಜಿಲ್ಲೆಯಾದ್ಯಂತ ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಅಂತರದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಸುರೇಶ ಬಿ.ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.

ಎಸ್.ಎಸ್.ಎಲ್.ಸಿ ಪರೀಕ್ಷೆ–3 ಜುಲೈ 05 ರಿಂದ 12 ರವರೆಗೆ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಕೊಪ್ಪಳ ಜಿಲ್ಲೆಯ ಒಟ್ಟು 23 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು, ಪರೀಕ್ಷೆಗಳನ್ನು ಸುಗಮ ಮತ್ತು ಶಾಂತಿಯುತವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ಅಂತರದ ಪ್ರದೇಶದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163 ರನ್ವಯ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ತಾಲ್ಲೂಕವಾರು ಪರೀಕ್ಷೆ ಕೇಂದ್ರಗಳ ವಿವರ: ಕೊಪ್ಪಳದ 06, ಗಂಗಾವತಿಯ 04, ಕನಕಗಿರಿಯ 02, ಕಾರಟಗಿಯ 01, ಕುಷ್ಟಗಿ ತಾಲ್ಲೂಕಿನ 05, ಯಲಬುರ್ಗಾದ 03 ಹಾಗೂ ಕುಕನೂರು ತಾಲ್ಲೂಕಿನ 02 ಪರೀಕ್ಷಾ ಕೇಂದ್ರಗಳು ಸೇರಿದಂತೆ ಒಟ್ಟು 23 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿವೆ.

ನಿಷೇಧಾಜ್ಞೆ ಆದೇಶದನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ. ಮೊಬೈಲ್, ಪೇಜರ್, ಜರಾಕ್ಸ್, ಟೈಪಿಂಗ್ ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಹಾಗೂ ನಿಯೋಜಿತ ಶಿಕ್ಷಕರನ್ನು ಜಾಗೃತ ದಳದವರನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರವಾನಿಗೆ ಇಲ್ಲದೆ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವುದನ್ನು ನಿಷೇಧಿಸಿದೆ. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯವಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

## ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ: ಪ್ರವೇಶಕ್ಕೆ ಅರ್ಜಿ ಆಹ್ವಾನ

**ಕೊಪ್ಪಳ:** ತಳಕಲ್, ಕುಕನೂರು ಮತ್ತು ಮುಧೋಳ ಪಟ್ಟಣದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2025–26ನೇ ಸಾಲಿನಲ್ಲಿ ಬಹು ಬೇಡಿಕೆ ಇರುವ ವಿವಿಧ ವೃತ್ತಿಗಳ ಪ್ರವೇಶಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಂಸ್ಥೆಗಳಲ್ಲಿ ವಿದ್ಯುತ್ ಶಿಲ್ಪಿ, ವಿದ್ಯುನ್ಮಾನ ದುರಸ್ತಿಗಾರ, ಜೋಡಣೆಗಾರ, ಉದ್ಯೋಗ ಯೋಜನೆ ಅಡಿಯಲ್ಲಿ ಸಿ.ಎನ್.ಸಿ. ಮಷನಿಂಗ್ ಟೆಕ್ನಿಷಿಯನ್, ಮೆಕ್ಯಾನಿಕ್ ಎಲೆಕ್ಟ್ರಿಕಲ್ ವೆಹಿಕಲ್, ವರ್ಚುವಲ್ ಅನಲೈಸಸ್ ಮತ್ತು ಡಿಸೈನರ್, ಇಂಜಿನಿಯರ್ ಡಿಸೈನ್ ಟೆಕ್ನೆಷಿಯನ್, ಮ್ಯಾನುಫೆಕ್ಚರಿಂಗ್ ಪ್ರೊಸೆಸ್ ಕಂಟ್ರೋಲ್ ಮತ್ತು ಆಟೋಮೆಷನ್, ಇಂಡಸ್ಟ್ರಿಯಲ್ ರೋಬೋಟಿಕ್ಸ್ ಮತ್ತು ಡಿಜಿಟಲ್ ಮ್ಯಾನುಫೆಕ್ಚರಿಂಗ್ ಸೀಟುಗಳು ಹಾಗೂ (ಪಿ.ಪಿ.ಪಿ)ಅಡಿಯಲ್ಲಿ ಪ್ರತಿಯೊಂದು ವೃತ್ತಿಯಲ್ಲಿ ಸೀಟುಗಳು ಲಭ್ಯವಿರುತ್ತವೆ.

ಮೇಲೆ ಕಾಣಿಸಿದ ವೃತ್ತಿಗಳ ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಆಗಸ್ಟ್ 30 ರೊಳಗೆ ಸಂಸ್ಥೆಗಳಿಗೆ ಮೂಲ ದಾಖಲಾತಿಗಳೊಂದಿಗೆ ಖುದ್ದು ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು, ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ತಳಕಲ್, ಕುಕನೂರು ಮತ್ತು ಮುಧೋಳ, ಮೊ.ಸಂ: 9740358208 ಕ್ಕೆ ಸಂಪರ್ಕಿಸಬಹುದು ಎಂದು ತಳಕಲ್‌ನ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಕಟಣೆ ತಿಳಿಸಿದೆ.

## ಅಂಗನವಾಡಿ ಹಾಗೂ ಮಹಿಳಾ ಮತ್ತು ಮಕ್ಕಳ ಇಲಾಖೆಯ ಸಿಬ್ಬಂದಿಗಳಿಗೆ ಪರಿಣಾಮಕಾರಿ ತರಬೇತಿ ಆಯೋಜಿಸಿ; ಸರ್ಕಾರದ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಕ್ರಮ ವಹಿಸಿ: ಜಿಲ್ಲಾ ಪಂಚಾಯತ ಸಿಇಓ ಭುವನೇಶ ಪಾಟೀಲ

**ಧಾರವಾಡ:** ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರ ಪ್ರಾಯೋಜಕತ್ವದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವದರಿಂದ ಅನೇಕ ಸಮಸ್ಯೆಗಳಿಗೆ ಪರಿಹಾರ ಕಾಣಬಹುದು. ಇಲಾಖೆಯ ಯೋಜನೆಗಳನ್ನು ನಿಯಮಾನುಸಾರ ಅನುಷ್ಠಾನಗೊಳಿಸುವಲ್ಲಿ ಅಂಗನಾಡಿ ಶಿಕ್ಷಕಿಯರು, ಸಹಾಯಕಿಯರು, ಮೇಲ್ವಿಚಾರಕರು ಮತ್ತು ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿಗಳ ಪಾತ್ರ ಮುಖ್ಯವಾಗಿರುವದರಿಂದ ಅವರಿಗೆ ಒಂದು ದಿನದ ಪುನರ್ ಮನನ ತರಬೇತಿ ಕಾರ್ಯಾಗಾರವನ್ನು ಇಲಾಖೆಯಿಂದ ಆಯೋಜಿಸಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಹೇಳಿದರು.

ಅವರು ಇಂದು (ಜು.5) ಸಂಜೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಪೋಷಣ ಟ್ರ್ಯಾಕರ್ ಮತ್ತು ವಿವಿಧ ಕಾರ್ಯಕ್ರಮಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ಜರುಗಿಸಿ, ಮಾತನಾಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮಹತ್ವದ ಇಲಾಖೆ ಆಗಿರುವದರಿಂದ ಅಧಿಕಾರಿ ಮತ್ತು ಅದೀನ ಸಿಬ್ಬಂದಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಹಾಜರಾತಿ ಹಾಗೂ ಸಂರಕ್ಷಣೆ ನಿಯಮಾನುಸಾರ ದಾಖಲಿಸಬೇಕು. ಪೋಷಣ ಅಭಿಯಾನದಡಿ ನಿರ್ಧಿಷ್ಟಪಡಿಸಿರುವ ನಿಯಮಗಳ ಪಾಲನೆ ಯಾಗಬೇಕು. ಫೇಸ್ ಕ್ಯಾಪ್ಚರ್‌ದಲ್ಲಿ ಮಕ್ಕಳ ದಾಖಲಾತಿಯನ್ನು ನಿಗದಿತ ಅವಧಿಯೊಳಗೆ ದಾಖಲಿ ಸಬೇಕೆಂದು ಅವರು ಸೂಚಿಸಿದರು. ಅಂಗನವಾಡಿ ಶಿಕ್ಷಕಿಯರು ಮತ್ತು ಸಹಾಯಕಿಯರು ಸರ್ಕಾರದ ನಿಯಮಗಳನ್ನು ಪಾಲಿಸುವ ಮೂಲಕ ಅಂಗನವಾಡಿ ಕೇಂದ್ರಗಳನ್ನು ಉತ್ತಮವಾಗಿ ನಿರ್ವಹಿಸಬೇಕು ಎಂದರು.

ಅಂಗನವಾಡಿ ಆಹಾರ ಸೋರಿಕೆ ತಡೆಗಟ್ಟಿ: ಅಂಗನವಾಡಿ ಕೇಂದ್ರಗಳಲ್ಲಿನ ಮಕ್ಕಳ ದಾಖಲಾತಿಗೆ ಅನುಗುಣವಾಗಿ ಪೋಷಣ ಅಭಿಯಾನದಡಿ ಆಹಾರ ಪೊಟ್ಟಣಗಳನ್ನು ವಿತರಿಸಲಾಗುತ್ತಿದೆ. ಪ್ರತಿ ಅಂಗನವಾಡಿ ಕೇಂದ್ರಕ್ಕೆ ಪೂರೈಸಿದ ಆಹಾರದ ಚೀಲ (ಬ್ಯಾಗ್) ಗಳನ್ನು ತಿಂಗಳ ಕೊನೆಗೆ ಆಯಾ ತಾಲೂಕಿನ ಸಿಡಿಪಿಓ ಕಚೇರಿಗೆ ಮರು ಸಲ್ಲಿಸಿ, ದಾಖಲಿಸಬೇಕು. ಅಂಗನವಾಡಿ ಶಿಕ್ಷಕಿಯರು, ಸಹಾಯಕಿಯರು ಮತ್ತು ಮೇಲ್ವಿಚಾರಕರು ಮಕ್ಕಳಿಗೆ ಪೂರೈಸುವ ಆಹಾರ ಸಾಮಗ್ರಿಗಳು ನಿಯಮಾನುಸಾರ ಸದ್ಬಳಕೆಯಾಗುವಂತೆ ನಿಗಾ ವಹಿಸಬೇಕು. ಯಾವುದೇ ರೀತಿಯಲ್ಲಿ ಮಕ್ಕಳಿಗೆ ನೀಡುವ ಆಹಾರ, ಆಹಾರ ಸಾಮಗ್ರಿಗಳು ಅನರ್ಹರಿಗೆ ಸಿಗದಂತೆ ಮತ್ತು ಅನಗತ್ಯವಾಗಿ ಸೋರಿಕೆಯಾಗದಂತೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕೆಂದು ಅವರು ನಿರ್ದೇಶಿಸಿದರು.

ಆಹಾರ ಆಯೋಗದ ಸಲಹೆಗಳನ್ನು ಗಮನಿಸಿ: ಕರ್ನಾಟಕ ರಾಜ್ಯ ಆಹಾರ ಆಯೋಗವು ಧಾರವಾಡ ಭೇಟಿ ಸಂದರ್ಭದಲ್ಲಿ ನೀಡಿರುವ ಸಲಹೆ ಮತ್ತು ಸೂಚನೆಗಳನ್ನು ಶಾಲಾ ಶಿಕ್ಷಣ ಇಲಾಖೆ ಹಾಗೂ ಬಿಸಿಯೂಟ ಪೂರೈಸುವ ಸಂಸ್ಥೆಗಳು ಪಾಲಿಸಬೇಕು.

ಅಡುಗೆ ಮನೆಗಳಲ್ಲಿ ಸ್ವಚ್ಛತೆ ಹಾಗೂ ಗುಣಮಟ್ಟದ ಆಹಾರವನ್ನು ಪೂರೈಸಬೇಕು. ಈ ಕುರಿತು ಸಂಬಂಧಿಸಿದ ಅಧಿಕಾರಿಗಳು ನಿರಂತರ ತಪಾಸಣೆ ಮೂಲಕ ಯಾವುದೇ ರೀತಿ ಲೋಪಗಳಾದಂತೆ ಮುನ್ನಚ್ಚರಿಕೆ ವಹಿಸಬೇಕೆಂದು ಸಿಇಓ ಭುವನೇಶ ಪಾಟೀಲ ಅವರು ತಿಳಿಸಿದರು.

ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಮಧ್ಯಾಹ್ನದ ಬಿಸಿಯೂಟ ಪೂರೈಸುತ್ತಿರುವ ಸರ್ಕಾರೇತರ ಸಂಸ್ಥೆಗಳು, ವಿದ್ಯಾರ್ಥಿಗಳಿಗೆ ಮೊಟ್ಟೆ ಹಾಗೂ ಬಾಳೆಹಣ್ಣು ವಿತರಿಸುವ ಕುರಿತು ಶೀಘ್ರದಲ್ಲಿ ನಿರ್ಧಾರ ತಿಳಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವರು ಈಗಾಗಲೇ ಸೂಚಿಸಿದ್ದಾರೆ. ಏಜೆನ್ಸಿಗಳು ಆದಷ್ಟು ಬೇಗ ತಮ್ಮ ಅಭಿಪ್ರಾಯ ಮತ್ತು ನಿರ್ಧಾರವನ್ನು ತಿಳಿಸಿದ್ದಲ್ಲಿ, ಪರ್ಯಾಯ ವ್ಯವಸ್ಥೆ ಕುರಿತು ಸರ್ಕಾರ ಮಟ್ಟದಲ್ಲಿ ಅಚಿತಿಮ ತಿರ್ಮಾನ ಮಾಡಲಾಗುತ್ತದೆ. ಆದ್ದರಿಂದ ಬಿಸಿಯೂಟ ಪೂರೈಸುವ ಸಂಸ್ಥೆಗಳು ತಮ್ಮ ಸ್ಪಷ್ಟವಾದ ಅಭಿಪ್ರಾಯವನ್ನು ಲಿಖಿತವಾಗಿ ನೀಡುವಂತೆ ಈಗಾಗಲೇ ಸೂಚನಾ ಪತ್ರ ನೀಡಲಾಗಿದೆ ಎಂದು ಅವರು ಸಭೆಯಲ್ಲಿ ತಿಳಿಸಿದರು.

ವೇದಿಕೆಯಲ್ಲಿ ಸ್ವಚ್ಛ ಭಾರತ ಮಿಷನ್ ಯೋಜನಾ ನಿರ್ದೇಶಕಿ ರೇಖಾ ಡೊಳ್ಳಿನ ಅವರು ಇದ್ದರು. ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಿಕ ಡಾ. ಎಚ್.ಎಚ್. ಕುಕನೂರ, ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ.ಕಮಲಾ ಬೈಲೂರ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್.ಕೆಳದಿಮಠ, ಅಕ್ಷರ ದಾಸೋಹದ ಜಿಲ್ಲಾ ಶಿಕ್ಷಣಾಧಿಕಾರಿ ರೂಪಾ ಪುರಂಪಕರ, ತಾಲೂಕಾ ಅಕ್ಷರದಾಸೋಹದ ಅಧಿಕಾರಿಗಳು, ತಾಲೂಕಾ ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿಗಳು, ಕೆಎಂಎಫ್ ಅಧಿಕಾರಿಗಳು, ಅದಮ್ಯ ಚೇತನ ಫೌಂಡೆಶನ್ ಮತ್ತು ಅಕ್ಷಯಪಾತ್ರೆ ಫೌಂಡೆಶನ್ (ಇಸ್ಕಾನ್) ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

### ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನ್‌ಶಿಪ್ ಅವಕಾಶ: ಅರ್ಜಿ ಆಹ್ವಾನ

**ಬಳ್ಳಾರಿ:**ಕರ್ನಾಟಕ ಮಾಧ್ಯಮ ಅಕಾಡೆಮಿಯು ಮಹಿಳಾ ಆಯವ್ಯಯ ಹಾಗೂ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆಗಳಡಿ ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಸ್ನಾತಕೋತ್ತರ ಪದವೀಧರರಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನ್‌ಶಿಪ್ ಅವಕಾಶ ಕಲ್ಪಿಸಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದವರಿಗೆ ಆದ್ಯತೆ ನೀಡಲಾಗುವುದು. ಬರವಣಿಗೆಯಲ್ಲಿ ಪರಿಣತಿ ಹೊಂದಿರುವ, ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. 2022–23 ಹಾಗೂ 2023–24 ನೇ ಶೈಕ್ಷಣಿಕ ವರ್ಷದಲ್ಲಿ ಯಾವುದೇ ವಿಷಯದಲ್ಲಿ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಪ್ರವೇಶ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.
*ವಿವರ:* ಮಹಿಳಾ ಆಯವ್ಯಯದಡಿ 10 ಮಹಿಳೆಯರು, ಪರಿಶಿಷ್ಟ ಜಾತಿ ಉಪಯೋಜನೆಯಡಿ 10 ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ಹಾಗೂ ಪರಿಶಿಷ್ಟ ಪಂಗಡ ಉಪ ಯೋಜನೆಯಡಿ 4 ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಇಂಟರ್ನ್‌ಶಿಪ್ ಗೆ ಅವಕಾಶ ಕಲ್ಪಿಸಲಾಗುವುದು. ಒಟ್ಟು 24 ಅಭ್ಯರ್ಥಿಗಳಿಗೆ ಇಂಟರ್ನ್‌ಶಿಪ್ ಅವಕಾಶ ಒದಗಿಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಎರಡು ತಂಡಗಳಲ್ಲಿ ಎರಡು ತಿಂಗಳ ಇಂಟರ್ನ್‌ಶಿಪ್ ಗೆ ಅವಕಾಶ ಕಲ್ಪಿಸಲಾಗುವುದು. ಇಂಟರ್ನ್‌ಶಿಪ್ ಗೆ ಸಂಸ್ಥೆ ಹಾಗೂ ಸ್ಥಳವನ್ನು ಅಕಾಡೆಮಿಯೇ ನಿಗದಿ ಪಡಿಸುತ್ತದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಅಕಾಡೆಮಿ ವತಿಯಿಂದ ಮಾಸಿಕ 20,000/– ರೂ. ಸ್ಟೈಫಂಡ್ ನೀಡಲಾಗುವುದು. ಅಭ್ಯರ್ಥಿಗಳು ತಮ್ಮ ಸ್ವವಿವರ ದೊಂದಿಗೆ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಪೂರಕ ದಾಖಲೆಗಳೊಂದಿಗೆ ಗೂಗಲ್ ಫಾರ್ಮ್ AD9 ರಲ್ಲಿ ಅರ್ಜಿ ಸಲ್ಲಿಸಬೇಕು. ಅಭ್ಯರ್ಥಿಗಳ ಆಯ್ಕೆಯ ಅಂತಿಮ ತೀರ್ಮಾನ ಅಕಾಡೆಮಿಯ ಸಮಿತಿಯದ್ದೇ ಅಗಿರುತ್ತದೆ. ಅರ್ಜಿ ಸಲ್ಲಿಸಲು ಜುಲೈ 25 ಕೊನೆಯ ದಿನವಾಗಿದ್ದು, ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಆಯೇಶಾ ಖಾನಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲೆಯಲ್ಲಿ ರಸಗೊಬ್ಬರದ ಕೊರತೆ ಇಲ್ಲ: ಜಂಟಿ ಕೃಷಿ ನಿರ್ದೇಶಕರು

**ಕೊಪ್ಪಳ:** ಜಿಲ್ಲೆಯಲ್ಲಿ ಬೇಡಿಕೆಗೆ ತಕ್ಕಷ್ಟು ರಸಗೊಬ್ಬರದ ದಾಸ್ತಾನಿದ್ದು, ಯಾವುದೇ ರಸಗೊಬ್ಬರದ ಕೊರತೆ ಇಲ್ಲವೆಂದು ಜಂಟಿ ಕೃಷಿ ನಿರ್ದೇಶಕರಾದ ಟಿ.ಎಸ್.ರುದ್ರೇಶಪ್ಪ ಅವರು ತಿಳಿಸಿದ್ದಾರೆ.

ಏಪ್ರಿಲ್ ನಿಂದ ಜುಲೈ ವರೆಗೆ ರಸಗೊಬ್ಬರ ಬೇಡಿಕೆಯು 69,536 ಟನ್ ಇದ್ದು, 73,376 ಟನ್ ರಸಗೊಬ್ಬರ ದಾಸ್ತಾನೀಕರಿಸಿದ್ದು, 39,206 ಟನ್ ರಸಗೊಬ್ಬರ ವಿತರಣೆ ಮಾಡಲಾಗಿದೆ. ಬಾಕಿ ಉಳಿದಿರುವ ದಾಸ್ತಾನು 34,170 ಟನ್ ರಸಗೊಬ್ಬರಗಳಲ್ಲಿ ಯೂರಿಯಾ 9,450 ಟನ್, ಡಿಎಪಿ 2,948 ಟನ್, ಎಂ.ಓ.ಪಿ 2,262 ಟನ್, ಕಾಂಪ್ಲೆಕ್ಸ್ 18,706 ಟನ್ ಇದರ ಜೊತೆಗೆ 4,890 ಲೀಟರ್ ನ್ಯಾನೋ ಯೂರಿಯಾ 2,160 ಲೀಟರ್ ನ್ಯಾನೋ ಡಿಎಪಿ ಕೃಷಿ ಪರಿಕರ ಮಾರಾಟಗಾರರ ಮಳಿಗೆಗಳಲ್ಲಿ ಲಭ್ಯವಿದ್ದು, ರಸಗೊಬ್ಬರದ ಕೊರತೆ ಇರುವುದಿಲ್ಲ.

ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿಎಪಿ ಸ್ಪ್ರೇ ಮಾಡುವುದರಿಂದ ಗಿಡಗಳಿಗೆ ನೇರವಾಗಿ ಪೋಷಕಾಂಶ ದೊರೆಯುವುದರಿಂದ ನೀರು ಹಾಗೂ ಮಣ್ಣನ್ನು ಸಂರಕ್ಷಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಕೊಪ್ಪಳ: ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಅವರು ಜುಲೈ 6 ಮತ್ತು 7 ರಂದು ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಸಚಿವರು ಜು. 6ರಂದು ಕೊಪ್ಪಳ ಜಿಲ್ಲೆಯ ಕಾರಟಗಿಯ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಹಾಗೂ ಕನಕಗಿರಿ ವಿಧಾನಸಭಾ ಕ್ಷೇತ್ರದ ಸಾರ್ವಜನಿಕರ ಭೇಟಿ ಮತ್ತು ಕುಂದುಕೊರತೆಗಳ ವಿಚಾರಣೆ ಮಾಡುವರು. ನಂತರ ಅಂದು ಕಾರಟಗಿಯಲ್ಲಿ ವಾಸ್ತವ್ಯ ಮಾಡುವರು. ಜು. 7ರಂದು ಬೆಳಿಗ್ಗೆ 10 ಗಂಟೆಗೆ ಕಾರಟಗಿಯಿಂದ ನಿರ್ಗಮಿಸಿ, 11.30ಕ್ಕೆ ಕೊಪ್ಪಳಕ್ಕೆ ಆಗಮಿಸಿ, ಮುಖ್ಯಮಂತ್ರಿಗಳು ಕೊಪ್ಪಳ ಜಿಲ್ಲೆಗೆ ಪ್ರವಾಸ ಕೈಗೊಳ್ಳಲಿರುವ ಕಾರಣ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆಯುವ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 3.30ಕ್ಕೆ ಕೊಪ್ಪಳದಿಂದ ನಿರ್ಗಮಿಸಿ, ಸಂಜೆ 5 ಗಂಟೆಗೆ ಕಾರಟಗಿಗೆ ಆಗಮಿಸಿ, ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಹಾಗೂ ಕನಕಗಿರಿ ವಿಧಾನಸಭಾ ಕ್ಷೇತ್ರದ ಸಾರ್ವಜನಿಕರ ಭೇಟಿ ಮತ್ತು ಕುಂದುಕೊರತೆಗಳ ವಿಚಾರಣೆ ನಡೆಸಿ, ಅಂದು ಕಾರಟಗಿಯಲ್ಲಿ ವಾಸ್ತವ್ಯ ಮಾಡುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ತುಂಗಾಕಿರಣ ಪತ್ರಿಕೆಯಲ್ಲಿ ಹೊಸಬರ ವೇದಿಕೆಯಾಗಿದ್ದು, ಸಾಮಾಜಿಕ ಕಳಾಕಳಿಯ ವಿಷಯಗಳ ಪತ್ರಿಕೆಯಲ್ಲಿ ನೀವು ಬರೆಯಬಹುದು. ಅಲ್ಲದೆ ಕಥೆ ಕವನಗಳನ್ನು ವಾಟ್ಸ್‌ಫ್ ಮೂಲಕ ಕಳಿಸಬಹುದು, ಹೆಚ್ಚಿನ ಮಾಹಿತಿಗಾಗಿ ಮೊ. 9986873183ಗೆ ಸಂಪರ್ಕಿಸಬಹುದು**

## ವಿದ್ಯಾರ್ಥಿಗಳಲ್ಲಿ ಬುನಾದಿ ಸಾಕ್ಷರತೆ ಮತ್ತು ಸಂಖ್ಯಾಜ್ಞಾನ ಅಭಿವೃದ್ಧಿಪಡಿಸಲು ಶಿಕ್ಷಕರಿಗೆ ಸೂಚನೆ

**ಕುರುಗೋಡು:** ರಾಜ್ಯ ಸರ್ಕಾರದ ಆಶಯದಂತೆ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಲ್ಲಿ ಕನ್ನಡ ಮತ್ತು ಗಣಿತ ವಿಷಯಗಳಲ್ಲಿ ಬುನಾದಿ ಸಾಕ್ಷರತೆ ಮತ್ತು ಸಂಖ್ಯಾಜ್ಞಾನ ಅಭಿವೃದ್ಧಿಪಡಿಸಲು ಶಿಕ್ಷಕರು ನಿಯಮಿತವಾಗಿ ಯೋಜನೆಗಳನ್ನು ರೂಪಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಸಿಇಒ ಮಹಮ್ಮದ್ ಹ್ಯಾರಿಸ್ ಸುಮೈರ್ ಸೂಚಿಸಿದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ನಿರ್ಮಿಸಿದ ಶಾಲಾ ಕೊಠಡಿಗಳನ್ನು ಪರಿಶೀಲಿಸಲು ಇಲ್ಲಿನ ಪಿಎಂ ಶ್ರೀ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಗೆ ಶುಕ್ರವಾರ ಭೇಟಿನೀಡಿದ್ದರು.

ತರಗತಿ ಕೊಠಡಿಗೆ ಭೇಟಿನೀಡಿದ ಅವರು, ವಿದ್ಯಾರ್ಥಿಗಳಿಂದ ಕನ್ನಡ ಮತ್ತು ಗಣಿತ ವಿಷಯ ಕುರಿತು ಸಂವಾದ ನಡೆಸಿದರು. ವಿದ್ಯಾರ್ಥಿಗಳು ಗಣಿತದ ಸಮಸ್ಯೆಗಳನ್ನು ಸುಲಭವಾಗಿ ಬಿಡಿಸುವುದನ್ನು ನೋಡಿ ಖುಷಿಪಟ್ಟರು. ವಿದ್ಯಾರ್ಥಿಗಳೊಂದಿಗೆ ಇಸ್ಕಾನ್ ಸರಬರಾಜು ಮಾಡುವ ಮಧ್ಯಾಹ್ನದ ಬಿಸಿಊಟ ಸವಿದ ಅವರು, ಶುಚಿ ಮತ್ತು ರುಚಿ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ತಾಲ್ಲೂಕು ಪಂಚಾಯಿತಿ ಇಒ ಕೆ.ವಿ. ನಿರ್ಮಲಾ, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಂ. ಸಿದ್ಧಲಿಂಗಮೂರ್ತಿ ಶಾಲೆಯ ಮುಖ್ಯಗುರುಗಳಾದ ಶ್ರೀಮತಿ ಎಂ.ಲಕ್ಷ್ಮಿ ಸಿಆರ್‌ಪಿ. ಎಸ್ ಜಡೇಶ. ಶಿಕ್ಷಕರಾದ ಕೆ.ಎಂರಾಜಶೇಖರಯ್ಯ ಇದ್ದರು.



## ಗಮನ ಸೆಳೆದ ಪೀರಲ ದೇವರುಗಳ ಆಕರ್ಷಕ ಕಡೆ ಸವಾರಿ

**ಕುರುಗೋಡು:** ತಾಲೂಕಿನ ಬಾದನಹಟ್ಟಿ ಗ್ರಾಮದ ಮೊಹರಂ ಹಬ್ಬದ ಅಂಗವಾಗಿ ಪೀರಲ ದೇವರುಗಳ ಕಡೆ ಸವಾರಿ ಮೆರವಣಿಗೆ ಸಡಗರ ಸಂಭ್ರಮದಿಂದ ಜರುಗಿತು.



ಮೊಹರಂ ಹಬ್ಬದ ಅಂಗವಾಗಿ ಭಾನುವಾರ ರಾತ್ರಿ ಬಾದನಹಟ್ಟಿ ಗ್ರಾಮದ ಮಸೀದಿಲ್ಲಿ ಪ್ರತಿಷ್ಠಾಪಿಸಿದ್ದ ವಿವಿಧ ಹೆಸರಿನ ಪೀರಲ ದೇವರುಗಳಿಗೆ ಭಕ್ತರು ಕೆಂಪುಸಕ್ಕರೆ ಮತ್ತು ಮಾದಲಿ ಅರ್ಪಿಸಿ ಹರಕೆ ತೀರಿಸಿದರು. ಕೆಲವು ಭಕ್ತರು ಮಸೀದಿಗಳ ಮುಂದೆ ಹಾಕಿದ್ದ ಅಗ್ನಿ ಕುಂಡದಲ್ಲಿ ಉಪ್ಪು ಮತ್ತು ಕಟ್ಟಿಗೆ ಸಮರ್ಪಿಸಿ ಭಕ್ತಿಮೆರೆದರು.

ಕೆಲವು ಭಕ್ತರು ಹುಲಿ ವೇಶ ಧರಿಸಿ ಹರಕೆ ತೀರಿಸಿದರೆ ಇನ್ನೂ ಕೆಲವರು ಮಸೀದಿಗಳ ಮುಂಭಾಗದ ಅಗ್ನಿಕುಂಡದಲ್ಲಿ ನಡೆಯುವ ಮೂಲಕ ಭಕ್ತಿಯ ಪರಾಕಾಷ್ಟೆಯನ್ನು ತಲುಪಿದ ದೃಶ್ಯ ಕಂಡುಬಂತು.

ಸೋಮವಾರ ಸಂಜೆ ಪೀರಲ ದೇವರುಗಳ ಕೊನೆಯ ಸವಾರಿಗೆ ಸಿದ್ದವಾಗಿ ಗ್ರಾಮದ ಬಾವಿ ಅಂಜಿನೇಯ ದೇವಸ್ಥಾನದಲ್ಲಿ ಮುಂಭಾಗದ ಬಯಲಿನಲ್ಲಿ ಸೇರಿದ ಸಂದರ್ಭದಲ್ಲಿ ದೇವರುಗಳ ಮೆರವಣಿಗೆಯ ಸೊಬಗನ್ನು ಕಣ್ತುಂಬಿಕೊಳ್ಳಲು ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಸೇರಿದ್ದರು. ಪೀರಲ ದೇವರುಗಳಿಗೆ ಮಂಡಕ್ಕಿ ಮತ್ತು ಬೆಲ್ಲ ಎಸೆದು ಭಕ್ತಿ ಮೆರೆದರು. ಕೆಲವು ಜನರು ತಮಟೆಯ ತಾಳಕ್ಕೆ ಹೆಜ್ಜೆಹಾಕುತ್ತಿರುವ ದೃಶ್ಯಗಮನ ಸೆಳೆಯಿತು.




**TUNGA KIRAN** kannada daily Morning Editor, Printer, Published & Owned By **PARASHURAM** word 12, No.25, Maruteshwara Nagar, Kanakagiri Road, GANGAVATHI-583227, Tq: Gangavathi, dist: Koppal, state: Karnataka, Printed at **Srishaila printer,** Old Sirigeri hospital, behand, Islampur, **GANGAVATHI**-583227, Tq: Gangavathi, dist: Koppal, state: Karnataka, e-mail: tungakiran2022@gmail.com **RNI NO:KARKAN: 2022/82770**